# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 118 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 25–11–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 118 | RNI No: KARKAN/2023/88462 | Chitradurga | Date: 25-11-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ತಂಬಾಕಿನ ದುಷ್ಪರಿಣಾಮದ ಅರಿವು ಮೂಡಿಸಲು ಹೆಚ್ಚಿನ ಗಮನ ವಹಿಸಬೇಕು 2

ಪ್ರತಿಯೊಬ್ಬ ಮನುಷ್ಯನಲ್ಲಿ ಅಸಾಧಾರಣ ಶಕ್ತಿ ಇದೆ: ಸ್ವಾಮೀಜಿ 3

ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆ ಈಡೇರಿಕೆಗೆ ಡಿ.10ಕ್ಕೆ ಬೆಳಗಾವಿ ಚಲೋ 4



ಸುದ್ದಿ, ಜಾಹಿರಾತಿಗೆ 9686622252


# ಗಂಡ ಹೆಂಡತಿ ಆದರ್ಶ ಬದುಕನ್ನ ವಾಲ್ಮೀಕಿ ರಾಮಾಯಣದಲ್ಲಿ ಕಾಣಬಹುದು: ಶಾಸಕ

» ಹೊಸದುರ್ಗ

ವಾಲ್ಮೀಕಿ ಅವರು ರಾಮಾಯಣದ ಮೂಲಕ ಅಪಾರ ಕೊಡುಗೆ ನೀಡಿದ್ದಾರೆ, ರಾಮಾಯಣದಲ್ಲಿ ಎಲ್ಲ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ. ಗ್ರಾಮದಲ್ಲಿ ಹೆಚ್ಚಿನದಾಗಿ ಸರ್ಕಾರಿ ನೌಕರರಿದ್ದು ತುಂಬಾ ಸಂತೋಷ ತಂದಿದೆ ಸಂಸ್ಕಾರ, ಸಂಸ್ಕೃತಿ, ಶಿಕ್ಷಣ ಕೊಡಿಸುವ ಜವಾಬ್ದಾರಿ ತಾಯಂದಿರಿಗೆ ಇರಬೇಕು.ವಾಲ್ಮೀಕಿಯವರ ಆದರ್ಶಗಳನ್ನ ಅಳವಡಿಸಿಕೊಂಡವರು ಜೀವನದಲ್ಲಿ ಮುಂದೆ ಬಂದಿದ್ದಾರೆ. ಪ್ರಭು ಶ್ರೀರಾಮ ವನವಾಸಕ್ಕೆ ಹೋದಾಗ ರಾಮನ ಪಾದುಕೆಯನ್ನ ಸಿಂಹಾಸನದ ಮೇಲೆ ಇಟ್ಟು ಅಧಿಕಾರ ನಡೆಸಿದ ಅಣ್ಣ ತಮ್ಮಂದಿರನ್ನು ಅಲ್ಲಿ ಕಾಣಬಹುದು. ಮಾತಾ ಪಿತೃಗಳ ಪ್ರೇಮ, ಅಣ್ಣ ತಮ್ಮಂದಿರ ಸಹೋದರ ಪ್ರೇಮ, ಗಂಡ ಹೆಂಡತಿಯ ಆದರ್ಶ ಬದುಕನ್ನ ಮಹರ್ಷಿ ವಾಲ್ಮೀಕಿ ರಾಮಾಯಣದಲ್ಲಿ ಕಾಣಬಹುದಾಗಿದೆ ಎಂದು ಶಾಸಕ ಬಿ,ಜಿ,ಗೋವಿಂದಪ್ಪ ತಿಳಿಸಿದರು.

ತಾಲೂಕಿನ ಗುತ್ತಿಕಟ್ಟೆಯಲ್ಲಿ ನಡೆದ ಮಹರ್ಷಿ ವಾಲ್ಮೀಕಿ ನೂತನ ವಿಗ್ರಹ ಪ್ರತಿಷ್ಠಾಪನೆ,ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಶ್ರೀ ಕರಿಯಮ್ಮ ದೇವಿ ಅಡ್ಡಪಲ್ಲಕ್ಕಿ ಮಹೋತ್ಸವ ಕಾರ್ಯಕ್ರಮದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದುಶ್ಚಟ ಮುಕ್ತ ಕುಟುಂಬ ನೆಮ್ಮದಿಯಿಂದ ಇರಲು ಸಾಧ್ಯ,ಸೋಮಾರಿತನ ದೂರ 'ವಾಗಿ ಗಟ್ಟಿ ಮನಸ್ಸು ಮಾಡಿ ಕುಟುಂಬ ಅಭಿವೃದ್ಧಿಯಾಗಲು ಯುವಕರು ಶ್ರಮಿಸಬೇಕು. ತಂದೆ ತಾಯಿ ಮಾತನ್ನು ಗೌರವಿಸಿದವರು ಎಲ್ಲಾ ಹಂತದಲ್ಲಿಯೂ ಅಭಿವೃದ್ಧಿಯಾಗಿದ್ದಾರೆ ಎಂದರು.ತಹಸೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ ಮಹರ್ಷಿ ವಾಲ್ಮೀಕಿ ಅಪಾರ ಜ್ಞಾನವನ್ನು ಪಡೆದು ಮನುಕುಲಕ್ಕೆ ಆದರ್ಶವಾಗಿದ್ದಾರೆ ವಾಲ್ಮೀಕಿ ಆದರ್ಶಗಳನ್ನ ನಾವು ಪಾಲಿಸಿದಾಗ ಈ ಜಯಂತಿಗೆ ಅರ್ಥ ಬರುತ್ತದೆ, ವಾಲ್ಮೀಕಿ ಒಂದು ಜ್ಞಾನದ ಸಂಕೇತ, ಇವರ ಸಂದೇಶ ಕೇವಲ ಮಾತಿಗೆ ಸೀಮಿತಗೊಳಿಸದೇ ವಾಲ್ಮೀಕಿ ಮಹರ್ಷಿಯವರು ಆದರ್ಶ, ಜ್ಞಾನ, ತ್ಯಾಗದ ಸಂಕೇತ, ಕೇವಲ ಕಥೆಗಳನ್ನು ಹೇಳುವುದೇ ಆಗಬಾರದು, ಆದರ್ಶ ಪುರುಷರ ಕಥೆಗಳನ್ನ ಕೇಳಿ ನಮ್ಮ ಜ್ಞಾನ ವೃದ್ಧಿಯಾಗಬೇಕು, ತಂದೆ ತಾಯಿ ನಮ್ಮಿಂದ ಅನಾಥಶ್ರಮ ಸೇರಬಾರದು

ವಾಲ್ಮೀಕಿ,ಕನಕದಾಸರ, ಆದರ್ಶ ನಮಗೆ ಧರಣಿಯಾಗಬೇಕು ಸಮಾಜದಲ್ಲಿರುವ ಮಹಿಳೆಯರನ್ನ ಅಕ್ಕ ತಂಗಿಯನ್ನ ಕಾಣುವುದೇ ರಾಮರಾಜ್ಯದ ಪರಿಕಲ್ಪನೆ, ಶಿಕ್ಷಣವೇ ನಿಮ್ಮ ಕುಟುಂಬದ ಅಭಿವೃದ್ಧಿಗೆ ಕಾರಣವಾಗುತ್ತದೆ. ಮೊಬೈಲ್ ಕೇವಲ ಮನರಂಜನೆಗೆ ಮಾತ್ರ ಸೀಮಿತ, ಅದರಿಂದ ನಮ್ಮ ಬದುಕು ಬದಲಾಗದು ಎಂದರು.

ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಜಿ ಕರಿಯಪ್ಪ ಮಾತನಾಡಿ ಸಮುದಯವಾದ ಬುಡಕಟ್ಟು ಸಮುದಾಯದಲ್ಲಿ ಹುಟ್ಟಿದ ಮಹರ್ಷಿ ವಾಲ್ಮೀಕಿ ರಾಮಾಯಣ ರಚಿಸುವುದರ ಮೂಲಕ ಜಗತ್ತಿನಲ್ಲಿ ಶ್ರೇಷ್ಠ ಜ್ಞಾನಿಯಾಗಿ ಹೊರಹೊಮ್ಮಿದ್ದಾರೆ ಕೆಲ ಮತಿಯವಾದಿಗಳು ವಾಲ್ಮೀಕಿಯವರು ಬ್ರಾಹ್ಮಣ ಸಮುದಾಯದವರು ಎಂದು ಹೇಳುತ್ತಿದ್ದಾರೆ, ಇದನ್ನ ನಿರೂಪಿಸಲು ಅವರ ಬಳಿ ನಿಖರವಾದ ಯಾವುದೇ ದಾಖಲೆಗಳಿಲ್ಲ, ಇಂತಹ ವಿರೋಧಿ ಹೇಳಿಕೆಗಳನ್ನ ಹೀಗೆ ಬಿಟ್ಟರೆ ಮುಂದೆ ನಮ್ಮ ವಾಲ್ಮೀಕಿ ಅವರನ್ನು ಅಪಹರಿಸುವ ಜನ ಇದ್ದಾರೆ ಇದರಿಂದ ನಾವು ಜಾಗೃತಗೊಳ್ಳುವ ಅವಶ್ಯಕತೆ ಇದೆ ಎಂದರು

ಕಾರ್ಯಕ್ರಮದಲ್ಲಿ ನಾಯಕ ಸಮಾಜದ ಅಧ್ಯಕ್ಷ ರಂಗನಾಥ್, ಉಪಾಧ್ಯಕ್ಷ ಗೌಡ್ರ ತಿಪ್ಪೇಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ, ಮುಖಂಡರಾದ ಕೆ ಸಿ ನಿಂಗಪ್ಪ,. ಅಕ್ಷರ ದಾಸೋಹ ನಿರ್ದೇಶಕ ಶಾಂತಪ್ಪ, ಜಿ ಎಸ್, ಪ್ರಕಾಶ್ ಗುತ್ತಿಕಟ್ಟೆ, ಜಯಪ್ರಕಾಶ್,ಲೊಕೇಶಪ್ಪ, ಮದುರೆ ನಟರಾಜ್, ಶಿಲ್ಪಿ ಬಾಬು ಚರಣ್, ಗ್ರಾಮ ಪಂಚಾಯಿತಿ ಸದಸ್ಯ ಮಂಜುನಾಥ್,ದಿವಾಕರ್,ನಿವೃತ್ತ ಇಂಜಿನಿಯರ್ ಚಂದ್ರಪ್ಪ, ಹೊನ್ನೇನಹಳ್ಳಿ ರಂಗಪ್ಪ, ನಾಯಕ ಸಮಾಜದ ಮಾಜಿ ಅಧ್ಯಕ್ಷರಾದ ಗುತ್ತಿಕಟ್ಟೆ ಕೆಂಚಪ್ಪ,ತುಂಬಿನಕೆರೆ ಬಸವರಾಜ್ ಯುವ ಮುಖಂಡ ಶರತ್ ದುಷ್ಯಂತ್, ಜಿಕೆ ರಂಗನಾಥ್, ಕುಮಾರ್, ನಿವೃತ್ತ ಸೈನಿಕ ದೇವೇಂದ್ರಪ್ಪ, ಯುವರಾಜ್, ಜಿಕೆ ರವಿ,ಚಿದಾನಂದ್ ಹನುಮಂತಪ್ಪ,ಗುಡಿಗೌಡ ತಿಪ್ಪೇಶ್, ವಾಲ್ಮೀಕಿ ಗೆಳೆಯರ ಬಳಗದ ಯುವಕರು, ಬಂಧುಗಳು ಇದ್ದರು.



## ಫಾಸ್ಟ್ ನ್ಯೂಸ್

### ಅಕ್ರಮ ಮರಳು ಸಾಗಾಟ: ಟ್ರ್ಯಾಕ್ಟರ್ ಮತ್ತು ಮಾಲೀಕನ ವಿರುದ್ಧ ಪ್ರಕರಣ ದಾಖಲು

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪೆತ್ತಮರಹಟ್ಟಿ ಬಳಿ ಅಕ್ರಮವಾಗಿ ಮರಳು ಸಾಗಾಟ ಮಾಡುತ್ತಿದ್ದ ಟ್ರ್ಯಾಕ್ಟರನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಲಾಗಿದೆ. ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿಗೆ ದೊರೆತ ಖಚಿತ ಮಾಹಿತಿ ಮೇರೆಗೆ ಠಾಣಾಧಿಕಾರಿ ಎಎಸ್‌ಐ ಜಿ.ಎಸ್.ಮಂಜುನಾಥ ಮತ್ತು ಸಿಬ್ಬಂದಿಗೆ ಸೂಚನೆ ನೀಡಿ ಸರ್ಕಾರ ಕಾನೂನು ಉಲ್ಲಂಘಿಸಿ ಖನಿಜ ಸಂಪತ್ತನ್ನು ಹೆಚ್ಚಿಗೆ ಲಾಭಗಳಿಸುವ ಉದ್ದೇಶದಿಂದ ನಗರದ ಕಡೆ ಮರಳು ತುಂಬಿದ ಟ್ರ್ಯಾಕ್ಟರ್ ಬರುತ್ತಿದ್ದು ಕಾನೂನು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಟ್ರ್ಯಾಕ್ಟರ್ ವಶಪಡಿಸಿಕೊಂಡು ಟ್ರ್ಯಾಕ್ಟರ್ ಮಾಲೀಕ ಮಟನ್‌ನಾಗರಾಜ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ.

### ನೇಮಕ



» ಚಿತ್ರದುರ್ಗ

ಸರ್ಕಾರಿ ಹೊರ ಗುತ್ತಿಗೆ ನೌಕರರ ಸಂಘದ ಚಿತ್ರದುರ್ಗ ಜಿಲ್ಲಾಧ್ಯಕ್ಷರಾಗಿ ಲೋಕೇಶ್ ಎಂ.ಇವರನ್ನು ಸರ್ಕಾರಿ ಹೊರ ಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸುಧಾಕರ್ ನೇಮಕ ಮಾಡಿದ್ದಾರೆ. ಸರ್ಕಾರಿ ಹೊರಗುತ್ತಿಗೆ ನೌಕರರ ಹಿತ ಕಾಯುವ ದೃಷ್ಟಿಯಿಂದ ಸಂಘಟನೆಯನ್ನು ಬಲಿಷ್ಠಗೊಳಿಸಲು ಹಾಗೂ ತಮಗೂ ಈ ಸೇವೆಯಲ್ಲಿ ಯಶಸ್ಸು ಸಿಗಲೆಂದು ಆಶಿಸಿದ್ದಾರೆ. ಲೋಕೇಶ್‌ರವರು ದಾವಣಗೆರೆ ವಿಶ್ವ ವಿದ್ಯಾಲಯದ ಜಿ.ಆರ್.ಹಳ್ಳಿಯಲ್ಲಿ ಸ್ನಾತಕೋತ್ತರ ಕೇಂದ್ರದಲ್ಲಿ ಹೊರ ಗುತ್ತಿಗೆಯಲ್ಲಿ ಕೆಲಸವನ್ನು ಮಾಡುತ್ತಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಮಾರುಗಮ್ಮ್ ಹಾಗೂ ಗಂಗಾಧರ್ ಹಾಜರಿದ್ದರು.

### ಇಂದು ದಶರಥರಾಮೇಶ್ವರ ಸ್ವಾಮಿಯ 34 ನೇ ವರ್ಷದ ದೀಪೋತ್ಸವ ಕಾರ್ಯಕ್ರಮ

» ಹೊಸದುರ್ಗ

ತಾಲೂಕಿನ ಶ್ರೀರಾಂಪುರ ಹೋಬಳಿ ಗುಡ್ಡದ ನೇರಲಕೆರೆ ಗ್ರಾಮದ ಶ್ರೀ ದಶರಥರಾಮೇಶ್ವರ ಸ್ವಾಮಿಯ 34 ನೇ ವರ್ಷದ ದೀಪೋತ್ಸವ ಕಾರ್ಯಕ್ರಮವು ನ.25 ರಂದು ಸೋಮವಾರ ಸಂಜೆ 7.30 ಕ್ಕೆ ಜರುಗಲಿದೆ ಎಂದು ದೇವಸ್ಥಾನದ ಕಮಿಟಿಯ ಪ್ರಕಟಣೆ ತಿಳಿಸಿದೆ.

### ನೀಲಕಂಠೇಶ್ವರ ಸ್ವಾಮಿ ಹಾಗೂ ದುರ್ಗಾಂಬಿಕ ದೇವಿಯ ಧಾರ್ಮಿಕ ಕಾರ್ಯಕ್ರಮಕ್ಕೆ ಚಾಲನೆ

» ಹೊಸದುರ್ಗ

ತಾಲ್ಲೂಕಿನ ಕಸಬಾ ಹೋಬಳಿಯ ಐಲಾಪುರದಲ್ಲಿ ನೆಲೆಸಿರುವ ನೀಲಕಂಠೇಶ್ವರ ಸ್ವಾಮಿ ಹಾಗೂ ದುರ್ಗಾಂಬಿಕ ದೇವಿಯ ಧಾರ್ಮಿಕ ಕಾರ್ಯಕ್ರಮಗಳು ನ.25 ರಿಂದ 26 ವರೆಗೆ ನಡೆಯಲಿದ್ದು ನ.25 ರ ಸೋಮವಾರ ಬ್ರಾಹ್ಮೀ ಮುಹೂರ್ತದಲ್ಲಿ ಅಂದು ಬೆಳಿಗ್ಗೆ 5 ರಿಂದ 5.45 ರ ವೇಳೆಗೆ 'ನಂದಿ ವಿಗ್ರಹ ಪ್ರತಿಷ್ಠಾಪನೆ' ರುದ್ರಾಭಿಷೇಕ, ಅಷ್ಟೋತ್ತರ ರಾಷ್ಟಾಶೀರ್ವಾದ ಮಹಾಮಂಗಳಾರತಿ ನಡೆಯಲಿದೆ. ನ.26 ರ ಮಂಗಳವಾರ ದುರ್ಗಾಂಬಿಕ ದೇವಿಗೆ ಅಭಿಷೇಕ, ವಿಶೇಷ ಅಲಂಕಾರ ಮಾಡಲಾಗುತ್ತದೆ. 8.45 ರಿಂದ ಋತ್ವಿಜರಾದ ತಾವರೆಕೆರೆ ಶಶಿಧರಶಾಸ್ತ್ರಿ ಮತ್ತು ಸಂಗಡಿಗರಿಂದ ಚಂಡಿಕಾ ಹೋಮ ನಡೆಯಲಿದೆ. ಕುಂಕುಮಾರ್ಚನೆ ನಡೆಯಲಿದೆ. ಚಳ್ಳಕೆರೆಯ ದೊಡ್ಡೇರಿ ಮಠದ ಮಲ್ಲಪ್ಪಸ್ವಾಮೀಜಿ ಅವರು ಸಾನ್ನಿಧ್ಯ ವಹಿಸಲಿದ್ದು ಶಾಸಕ ಬಿ. ಜಿ ಗೋವಿಂದಪ್ಪ ಕಾರ್ಯಕ್ರಮ ಉದ್ಘಾಟಿಸುವರು.

# ಗ್ರಾಮೀಣ ಭಾಗಗಳಲ್ಲಿ ನಡೆಯುವ ಉತ್ಸವಗಳು ಜನರ ವಿಶ್ವಾಸದ ಪ್ರತೀಕ: ಡಾ.ಬಿ.ಯೋಗೇಶ್‌ಬಾಬು

» ಚಳ್ಳಕೆರೆ

ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಆಡಳಿತದಲ್ಲಿ ಉಪಚುನಾವಣೆಯಲ್ಲಿ ಮೂರು ಸ್ಥಾನ ಗೆಲ್ಲುವ ಮೂಲಕ ಪಕ್ಷ ಮತ್ತಷ್ಟು ಬಲಗೊಂಡಿದೆ. ಪಕ್ಷದ ಗ್ಯಾರಂಟಿಗಳಿಗೆ ಮತದಾರ ಮೂರು ಕ್ಷೇತ್ರದಲ್ಲಿ ಮಣೆಹಾಕಿದ್ದಾನೆ ಎಂದು ಕರ್ನಾಟಕ ರಾಜ್ಯ ದ್ರಾಕ್ಷಿ ಮತ್ತು ವೈನ್ ಬೋರ್ಡ್ ನ ಅಧ್ಯಕ್ಷರಾದ ಡಾ.ಬಿ ಯೋಗೇಶ್ ಬಾಬು ತಿಳಿಸಿದರು.

ಅವರು, ಶನಿವಾರ ತಳಕು ಹೋಬಳಿಯ ಘಟಪರ್ತಿ ಗ್ರಾಮದಲ್ಲಿ ಗ್ರಾಮ ದೇವತೆ ಗೌರಿದೇವಿ ಮತ್ತು ಕನಕ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.


ಪುಟ 2




## ಸಾಂಸ್ಕೃತಿಕ ಸ್ಪರ್ಧೆ: ಹೊಸದುರ್ಗದ ವಿದ್ಯಾರ್ಥಿಗಳು ವಿಭಾಗ ಮಟ್ಟಕ್ಕೆ ಆಯ್ಕೆ



**ಹೊಸದುರ್ಗ:** ಕರ್ನಾಟಕ ರಾಜ್ಯ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ ಹಾಗು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಮತ್ತು ಶ್ರೀ ಬೃಹನ್ಮಠ ಸಂಯುಕ್ತ ಪದವಿ ಪೂರ್ವ ಕಾಲೇಜು, ಚಿತ್ರದುರ್ಗ ಇವರ ಸಹಯೋಗದೊಂದಿಗೆ ನ. 22 ರಂದು ನಡೆದ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಹೊಸದುರ್ಗ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಜಿಲ್ಲಾ ಮಟ್ಟದಿಂದ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದು


ಪುಟ 2


**ಪ್ರಮುಖ ಸುದ್ದಿ**

# ಹೊಸ ಚಿತ್ರನಟರನ್ನು ಪ್ರೋತ್ಸಾಹಿಸಿ: ಶಿವರಾಜ್ ಕುಮಾರ್

» ಚಿತ್ರದುರ್ಗ

ನಮಗೆ ಪ್ರೋತ್ಸಾಹ ನೀಡಿದಂತೆ ಹೊಸ ಕಲಾವಿದರ ಚಿತ್ರಗಳನ್ನು ವಿಕ್ಷಣೆ ಮಾಡುವುದರ ಮೂಲಕ ಪ್ರೋತ್ಸಾಹವನ್ನು ನೀಡುವಂತೆ ಕರುನಾಡ ಚಕ್ರವರ್ತಿ ಹ್ಯಾಟ್ರಿಕ್ ಹೀರೋ ಶಿವರಾಜ ಕುಮಾರ್ ಅಭಿಮಾನಿಗಳಲ್ಲಿ ಮನವಿ ಮಾಡಿದ್ದಾರೆ.

ಚಿತ್ರದುರ್ಗದ ನಗರದ ಪ್ರಸನ್ನ ಚಿತ್ರಮಂದಿರದಲ್ಲಿ ಅವರು ನಟಿಸಿದ "ಭೈರತಿ ರಣಗಲ್" ಚಿತ್ರ ತೆರೆ ಕಂಡಿದ್ದು ಅಭಿಮಾನಿಗಳಿಂದಲೂ ಸಹಾ ಉತ್ತಮವಾದ ಪ್ರೋತ್ಸಾಹ ಸಿಕ್ಕಿದೆ.

ಈ ಹಿನ್ನಲೆಯಲ್ಲಿ ಚಿತ್ರ ಪ್ರದರ್ಶನವಾಗುತ್ತಿರುವ ಚಿತ್ರಮಂದಿರಗಳಿಗೆ ಭೇಟಿಯನ್ನು ನೀಡುವ ಸಲುವಾಗಿ ಚಿತ್ರದುರ್ಗ ನಗರಕ್ಕೆ ಪತ್ನಿ ಗೀತಾ ಶಿವರಾಜ ಕುಮಾರ್ ಜೊತೆಯಾಗಿ ಆಗಮಿಸಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಕಳೆದ 3–4 ದಶಕಗಳಿಂದ ನಮಗೆ ಅಭಿಮಾನಿಗಳು ಚಿತ್ರವನ್ನು ವೀಕ್ಷಣೆ ಮಾಡುವುದರ ಮೂಲಕ ಪ್ರೋತ್ಸಾಹವನ್ನು ನೀಡುತ್ತಿದ್ದಾರೆ.

ಇತ್ತೀಚಿನ ದಿನಮಾನದಲ್ಲಿ ಪ್ರೇಕ್ಷಕರು ಚಲನ ಚಿತ್ರ ಮಂದಿರಕ್ಕೆ ಬರುವುದು ಕಡಿಮೆಯಾಗಿತ್ತು, ಆದರೆ ಇತ್ತೀಚಿನ ದಿನದಲ್ಲಿ ಉತ್ತಮವಾದ ಚಿತ್ರಗಳು ತೆರೆ ಕಾಣುತ್ತಿರುವುದರಿಂದ ಪ್ರೇಕ್ಷಕರು ಚಿತ್ರ ಮಂದಿರದತ್ತ ಕಾಲು ಹಾಕುತ್ತಿದ್ದಾರೆ. ಉತ್ತಮವಾದ ಚಿತ್ರಗಳನ್ನು ನೀಡಿದರೆ ಪ್ರೇಕ್ಷಕರು ಬರುತ್ತಾರೆ ಎಂಬ ನಂಬಿಕೆ ನನಗೆ ಇದೆ ಎಂದರು.

ಅಪ್ಪು ನಮ್ಮೆಲ್ಲರಲ್ಲು ಇದ್ದಾನೆ, ಅಪ್ಪು ನೆನೆಸಿಕೊಳ್ಳದ ದಿನಗಳಿಲ್ಲ. ಅವನನ್ನ ನೆನೆಸಿಕೊಳ್ಳದಿದ್ದರೆ ನಾನು ಅಣ್ಣನೆ ಆಗುವುದಿಲ್ಲ. ಅಪ್ಪುನ ನೆನೆಸಿಕೊಳ್ಳಲು ಯಾವಾಗ ಆದರು ಸರಿ ಅಪ್ಪು, ನನ್ನೊಳಗೆ ಸದಾ ಅಪ್ಪು ಇದ್ದಾನೆ ಎಂದಾಗ ನೆನೆಸಿಕೊಳ್ಳುವ ಅವಶ್ಯಕತೆಯೇ ಇಲ್ಲ.

ಭೈರತಿ ರಣಗಲ್ ಯಶಸ್ವಿಯಾಗಿ ನಡೆಯುತ್ತಿದೆ. ಜನ ಚಿತ್ರಮಂದಿರಕ್ಕೆ ಬರುತ್ತಿಲ್ಲ ಎನ್ನುವ ಅಪವಾದ ಇತ್ತು. ಆದರೆ, ಜನ ಬರುತ್ತಿದ್ದಾರೆ. ಅಮೇರಿಕಾದಲ್ಲೂ ಎರಡನೇ ವಾರ ಚಿತ್ರ ನಡೆಯುತ್ತಿದೆ. ದುಬೈನಲ್ಲೂ ರಿಲೀಸ್ ಆಗಿದೆ.

ಮುಂದಿನ ವಾರ ತೆಲುಗು, ತಮಿಳು ಸೇರಿದಂತೆ ಎಲ್ಲ ಕಡೆಗಳಲ್ಲಿ ಚಿತ್ರ ಬರಲಿದೆ ಎಂದರು. ಮಫ್ತಿ–2 ತೆರೆಗೆ ಬರುವ ನಿರೀಕ್ಷೆ ಇದೆ. ಭೈರತಿ ರಣಗಲ್ ಮೊದಲು ಬಂದು ಮಫ್ತಿಯಲ್ಲಿ ಮುಗಿಯಲಿದೆ.

ಭೈರತಿ ರಣಗಲ್ ಹಾಗೂ ಮಫ್ತಿ ಸರಣಿ ಕಥೆಗಳು ಎಂದು ಹೇಳಿದ ಅವರು ಈ ವರ್ಷ ಕನ್ನಡದಲ್ಲಿ ಉತ್ತಮ ಚಿತ್ರಗಳು ತೆರೆಗೆ ಬಂದಿವೆ. ಭೀಮ, ಭಗೀರ, ಭೈರತಿ ರಣಗಲ್, ಕೃಷ್ಣಂ ಪ್ರಣಯ ಸಖಿ ರೀತಿಯ ಒಳ್ಳೆಯ ಕಥೆಗಳು ಬಂದಿವೆ. ಹೀಗಾಗಿ ಚಿತ್ರಮಂದಿರಕ್ಕೆ ಜನ ಬರುತ್ತಿದ್ದಾರೆ. ಚಿತ್ರ ಯಶಸ್ವಿಯಾಗಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಚಿತ್ರದುರ್ಗದಿಂದ ಪ್ರವಾಸ ಆರಂಭಿಸಿದ್ದೇವೆ. ನಾಳೆ ದಾವಣಗೆರೆ, ಶಿರಸಿ, ಶಿವಮೊಗ್ಗ, ರಾಣೆಬೆನ್ನೂರು ಹಾಗೂ ಹುಬ್ಬಳ್ಳಿಗೆ ಪ್ರವಾಸ ಮಾಡಿ ಅಭಿಮಾನಿಗಳನ್ನು ಮಾತನಾಡಿಸಲಿದ್ದೇವೆ ಎಂದರು.

ಇಂದು ಚಿತ್ರದುರ್ಗದ ಪ್ರಸನ್ನ ಚಿತ್ರಮಂದಿರಕ್ಕೆ ಆಗಮಿಸಿದ್ದ ನಟ ಶಿವಣ್ಣ ಅಭಿಮಾನಿಗಳನ್ನು ಕಂಡು ಖುಷಿಯಾದರು. ಇತ್ತ ಶಿವಣ್ಣನನ್ನು ಕಂಡ ತಕ್ಷಣ ನೆರೆದಿದ್ದ ಸಾವಿರಾರು ಅಭಿಮಾನಿಗಳು, ಶಿಳ್ಳೆ, ಕೇಕೆ, ಚಪ್ಪಾಳೆ ಹಾಕಿ ಸಂಭ್ರಮಿಸಿದರು. ಚಿತ್ರಮಂದಿರದ ಎದುರು ಬೃಹತ್ ಹಾರ ಹಾಕಿದ ಅಭಿಮಾನಿಗಳು, ಶಿವಣ್ಣನ ಜೊತೆ ಸೆಲ್ಫಿ ಕ್ಲಿಕ್ಕಿಸಿಕೊಳ್ಳಲು ಮುಗಿಬಿದ್ದರು.

ಈ ಸಂದರ್ಭದಲ್ಲಿ ಮಾಜಿ ನಗರಸಭೆ ಅಧ್ಯಕ್ಷ ಬಿ.ಕಾಂತರಾಜ್, ಗೀತಾ ಶಿವರಾಜ್ ಕುಮಾರ್, ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ್, ಪ್ರಸನ್ನ ಚಲನಚಿತ್ರ ಮಂದಿರದ ಮಾಲಿಕರಾದ ಪ್ರಜ್ವಲ್, ಟಿಪ್ಪು ಖಾಸಿಂ ಆಲಿ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಅಭಿಮಾನಿಗಳು ಭಾಗವಹಿಸಿದ್ದರು.



## ಫಾಸ್ಟ್ ನ್ಯೂಸ್

### ಗ್ರಾಮೀಣ ಭಾಗಗಳಲ್ಲಿ ನಡೆಯುವ ಉತ್ಸವಗಳು ಜನರ ವಿಶ್ವಾಸದ ಪ್ರತೀಕ: ಡಾ.ಬಿ.ಯೋಗೇಶ್‌ಬಾಬು

» ಮೊದಲ ಪುಟದಿಂದ

ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ನೇತೃತ್ವದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರ ಮಾರ್ಗದರ್ಶನದಲ್ಲಿ ನಡೆದ ಮೂರು ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಿದೆ ಇದು ಜನಪರ ಸರ್ಕಾರವೆಂದು ನಿರೂಪಿತವಾಗಿದೆ ಎಂದರು. ಕಳೆದ ನೂರಾರು ವರ್ಷಗಳಿಂದ ಭಗವಂತನನ್ನು ಪೂಜಿಸುವ ಮೂಲಕ ನಾವುಗಳು ನೆಮ್ಮದಿಯ ಜೀವನವನ್ನು ನಡೆಸಿಕೊಂಡು ಬಂದಿದ್ದೇವೆ. ಇಂದಿಗೂ ಗ್ರಾಮಾಂತರ ಪ್ರದೇಶಗಳಲ್ಲಿ ಅನೇಕ ಹಬ್ಬ, ಉತ್ಸವಗಳನ್ನು ನಮ್ಮ ಹಿರಿಯರ ಮಾರ್ಗದರ್ಶನದಂತೆ ನಡೆಸುತ್ತಾ ಬಂದಿದ್ದೇವೆ. ಗ್ರಾಮೀಣ ಭಾಗದ ಉತ್ಸವಗಳಲ್ಲಿ ಎಲ್ಲರಲ್ಲೂ ಹೆಚ್ಚು ಸಂತೋಷ ಮನೆ ಮಾಡಿರುತ್ತದೆಯಲ್ಲದೆ, ಉತ್ಸವ ಆಚರಣೆಯಿಂದ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗುತ್ತದೆ ಗ್ರಾಮದಲ್ಲಿ ಇಂದು ಎರಡು ವಿಶೇಷ ಕಾರ್ಯಕ್ರಮ ನಡೆಯುತ್ತಿದೆ. ತಮ್ಮ ಕೀರ್ತನೆಗಳ ಮೂಲಕ ಜನರಿಗೆ ಜ್ಞಾನದ ಬೆಳಕು ನೀಡಿದ ಮಹಾನ್ ಸಂತಭಕ್ತಶ್ರೇಷ್ಠ ಕನಕದಾಸರು. ಪ್ರತಿವರ್ಷ ಗ್ರಾಮದಲ್ಲಿ ಗೌರಿದೇವಿ ಜಾತ್ರೆಯ ಮೂಲಕ ಈ ಭಾಗದ ಜನರು ಗ್ರಾಮದೇವತೆಯ ಆಶೀರ್ವಾದ ಪಡೆಯುತ್ತಿದ್ದಾರೆ. ವಿಶೇಷವಾಗಿ ಈ ವರ್ಷ ಉತ್ತಮ ಮಳೆ ಬೆಳೆಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಚಂದ್ರಣ್ಣ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಸಿ.ಯಲ್ಲಪ್ಪ, ರವಿಕುಮಾರ್, ರಂಗಸ್ವಾಮಿ, ಸದಸ್ಯರಾದ ಪುಟ್ಟಮ್ಮ, ದಿನೇಶ್, ಪರಮೇಶ್ವರ್, ಸಹಕಾರಿ ಸಂಘದ ಅಧ್ಯಕ್ಷ ಮಾರಣ್ಣ, ಸಿದ್ದಪ್ಪ, ವೀರಣ್ಣ, ಗುರುಮೂರ್ತಿ, ಪರಮೇಶ್ವರ, ನಿರಂಜನ್‌ಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

### ಹೋಟಲ್ ಮುರುಳಿ ನಿಧನ

» ಹೊಸದುರ್ಗ




ಪಟ್ಟಣದಪ್ರಿಯದರ್ಶಿನಿಹೋಟಲ್‌ಮಾಲಿಕಹಾಗೂ ವಾಕರ್ ಅಸೋಷಿಯೇಷನ್ ಸದಸ್ಯ ಹಾಗೂ ಬಿಜೆಪಿ ಕಾರ್ಯಕರ್ತ ಮುರುಳಿ (52) ಶನಿವಾರ ಮಧ್ಯಾಹ್ನ ಹೃದಯಾಘಾತದಿಂದ ನಿಧನರಾಗಿದ್ದಾರೆ. ಮುರುಳಿ ಅವರು ಶನಿವಾರ ಮಧ್ಯಾಹ್ನ 2.30 ರ ಸಮಯಲ್ಲಿ ಮನೆಯಲ್ಲಿ ಊಟ ಮಾಡಿ ಸ್ವಲ್ಪ ಹೊತ್ತು ಮೊಬೈಲ್ ವೀಕ್ಷಿಸಿ ಮಲಗಿದ್ದಾರೆ. ಮನೆಯಲ್ಲಿದ್ದವರು ಸಂಜೆ 4.30 ರ ಸುಮಾರಿಗೆ ಅವರನ್ನನಿದ್ರೆಯಿಂದ ಎಚ್ಚರಗೊಳಿಸಲು ಹೋದಾಗ ಆಗಲೆ ಮಲಗಿದ್ದ ಜಾಗದಲ್ಲೆ ಮುರುಳಿ ಚಿರನಿದ್ರೆಗೆ ಜಾರಿದ್ದಾರೆ.ಮೃತರು ಅಮ್ಮ,ಸಹೋದರ,ಸಹೋದರಿಯರು,ಪತ್ನಿ,ಓರ್ವಪುತ್ರ,ಓರ್ವಪುತ್ರಿ ಹಾಗೂ ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ ಇವರ ಅಂತ್ಯಕ್ರಿಯೆಯು ಭಾನುವಾರ ಬೆಳಿಗ್ಗೆ 10.30 ಕ್ಕೆ ಪಟ್ಟಣದ ಹಿಂದೂ ರುದ್ರಭೂಮಿಯಲ್ಲಿ ಅಪಾರ ಬಂಧು ಬಳಗ ಹಾಗೂ ಅಪಾರ ಸ್ನೇಹಿತರ ನಡುವೆ ಸಂಪ್ರದಾಯದ ಪ್ರಕಾರ ನೆರವೇರಿತು.

### ಇಂದು ಶ್ರೀ ಈಶ್ವರ ಸ್ವಾಮಿ ದೇವಸ್ಥಾನದಲ್ಲಿ ಮಹಾ ರುದ್ರಾಭಿಷೇಕ ಪೂಜೆ

» ಹೊಸದುರ್ಗ

ಪಟ್ಟಣದ ತರಕಾರಿ ಮಾರುಕಟ್ಟೆಯಲ್ಲಿರುವ ಶ್ರೀ ಈಶ್ವರ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ಶಿವಪ್ರಿಯ ಸೇವಾ ಸಮಿತಿ ಮತ್ತು ಸಮಸ್ತ ಭಕ್ತ ವೃಂದದವರಿಂದ ನ.25 ರಂದು ಸೋಮವಾರ ಬೆಳಿಗ್ಗೆ 6–00 ಗಂಟೆಗೆ ಶ್ರೀ ಈಶ್ವರ ಸ್ವಾಮಿಯವರಿಗೆ ಮಹಾ ರುದ್ರಾಭಿಷೇಕ ನಂತರ 8–00 ಗಂಟೆಗೆ ಬಿಲ್ವಾರ್ಚನೆ ಮಹಾ ಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ಕಾರ್ಯಕ್ರಮವಿರುತ್ತದೆ. ಇದೇ ದಿನ ಸಂಜೆ 6 ಗಂಟೆ ಯಿಂದ ವೀರಗಾಸೆ ವೈಭವ, ದೀಪಾರಾದನೆ ನಂತರ ವಿಶೇಷ ವಿವಿಧ ಆರತಿಗಳೊಂದಿಗೆ ಮಹಾ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಶ್ರೀ ಈಶ್ವರ ಸ್ವಾಮಿಯವರ ದರ್ಶನ ನಂತರ ಶಿವ ತಾಂಡವ ನೃತ್ಯ ಮಂಡಲ ಪೂಜೆಯೊಂದಿಗೆ ಭದ್ರಕಾಳಿ ಅಮ್ಮನವರ ನೃತ್ಯ ವೈಭವ ಕಾರ್ಯಕ್ರಮ ಜರುಗಲಿದೆ ಎಂದು ಶಿವ ಪ್ರಿಯ ಸೇವಾ ಸಮಿತಿಯ ಪ್ರಕಟಣೆ ತಿಳಿಸಿದೆ.

### ದಾವಣಗೆರೆ ವಿವಿಗೆ ನಾಮ ನಿರ್ದೇಶಿತ ಸದಸ್ಯರಾಗಿ ಡಾ.ಜಿ.ಕೆ ಪ್ರೇಮ ನೇಮಕ



ಹೊಸದುರ್ಗ: ದಾವಣಗೆರೆ ವಿಶ್ವ ವಿದ್ಯಾಲಯದ ಸಿಂಡಿಕೇಟ್ ಪ್ರಾಧಿಕಾರಕ್ಕೆ ನಾಮ ನಿರ್ದೇಶಿತ ಸದಸ್ಯರನ್ನಾಗಿ ಡಾ.ಜಿ.ಕೆ ಪ್ರೇಮ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶಿಸಿದೆ. ಈ ಸಂಬಂಧ ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿಯವರು ಅಧಿಸೂಚನೆ ಹೊರಡಿಸಿದ್ದು ಡಾ.ಜಿ.ಕೆ ಪ್ರೇಮ ಅವರು ಹೊಸದುರ್ಗ ತಾಲೂಕು ಚಿತ್ತಯ್ಯನಹಟಿ ಗ್ರಾಮದವರಾಗಿದ್ದು ಎಂಎ, ಪಿಹೆಚ್.ಡಿ ಪದವಿಧರರಾಗಿದ್ದಾರೆ.

# ತಂಬಾಕಿನ ದುಷ್ಪರಿಣಾಮದ ಅರಿವು ಮೂಡಿಸಲು ಹೆಚ್ಚಿನ ಗಮನ ವಹಿಸಬೇಕು: ನ್ಯಾ. ಕರೆಣ್ಣವರ

» ದಾವಣಗೆರೆ

ತಂಬಾಕು ಸೇವನೆ ಮಾನವನ ಜೀವನಕ್ಕೆ ಅಪಾಯವೆಂದು ತಿಳಿದಿದ್ದರೂ, ಅದರ ಚಟಕ್ಕೆ ಬಿದ್ದು ಯುವಜನತೆ ಹಾಳಾಗುತ್ತಿರುವುದು ಬೇಸರ ಸಂಗತಿ. ಪ್ರತಿಯೊಬ್ಬರು ತಂಬಾಕಿನಿಂದ ದೂರವಿರಲು ಸಾರ್ವಜನಿಕರಿಗೆ ಇನ್ನೂ ಹೆಚ್ಚಿನ ಅರಿವು ಮೂಡಿಸಬೇಕಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮಾ. ಕರೆಣ್ಣವರ್ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತೃತೀಯ ತ್ರೈಮಾಸಿಕ ಪ್ರಗತಿ ಪರೀಶೀಲನಾ ಸಭೆಯಲ್ಲಿ ಮಾತನಾಡಿದರು.

ಜಿಲ್ಲಾ ಮಟ್ಟದ ಸಭೆಗೆ ಸಂಬಂಧ ಪಟ್ಟ ಅಧಿಕಾರಿಗಳು ಅಂಕಿ ಅಂಶಗಳೊಂದಿಗೆ ಕಡ್ಡಾಯವಾಗಿ ಹಾಜರಿರಬೇಕು ಎಂದು ಎಚ್ಚರಿಕೆ ನೀಡಲಾಯಿತು.

ರೈಲ್ವೆ ಇಲಾಖೆ ಪೊಲೀಸ್ ಇಲಾಖೆ ಉತ್ತಮವಾದ ಕೆಲಸ ನಿರ್ವಹಿಸುತ್ತಿದೆ. ಅದೇ ರೀತಿ ಇನ್ನಿತರೆ ಇಲಾಖೆಗಳು ಹೆಚ್ಚಿನ ಮಟ್ಟದಲ್ಲಿ ಗಮನವಿಟ್ಟು ಕೆಲಸ ಮಾಡಬೇಕಿದೆ. 6 ತಾಲ್ಲೂಕುಗಳ ಬಿಇಓ ಗಳು ಸಭೆಗೆ ಗೈರು ಆಗಿರುವುದರಿಂದ ಅವರುಗಳಿಗೆ ನೋಟೀಸ್ ಜಾರಿ ಮಾಡಲು ತಿಳಿಸಿದರು.




ತಂಬಾಕು, ಬಾಲ್ಯ ವಿವಾಹ, ಪೋಕ್ಸೊ ಬಗ್ಗೆ ಮಾಹಿತಿ ನೀಡಲು ಪ್ರತಿಯೊಂದು ಶಾಲೆಯಲ್ಲಿ ಸಮಿತಿಯಾಗಬೇಕು ಎಂದು ತಿಳಿಸಿದರು. ಖಾಸಗಿ ಶಾಲೆಗಳಲ್ಲಿ ಹೆಚ್ಚಿನ ಮಟ್ಟದಲ್ಲಿ ತಂಬಾಕು ಸೇವನೆ, ಪೋಕ್ಸೊ ಕಾಯ್ದೆ ಬಗ್ಗೆ ಮಕ್ಕಳಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ರಾಘವನ್ ಜಿ.ಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ 235 ಐ.ಈ.ಸಿ ಅರಿವು ಕಾರ್ಯಕ್ರಮವನ್ನು ಇಲ್ಲಿಯವರೆಗೆ ಅನುಷ್ಟಾನ ಮಾಡಲಾಗಿದೆ. ಹಾಗೂ ದಾವಣಗೆರೆ 7, ಹೊನ್ನಾಳಿ 5, ಜಗಳೂರು 4, ಚನ್ನಗಿರಿ 4 , ಹರಿಹರ 1 ತಂಬಾಕು ಮುಕ್ತ ಗ್ರಾಮ ಎಂದು ಘೋಷಿಸಲಾಗಿದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯಿಂದ 64 , ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ 16 ತಂಬಾಕು ಮುಕ್ತ ಸಂಸ್ಥೆ ಎಂದು ಘೋಷಿಸಲಾಗಿದೆ. ವಿಭಾಗವಾರು ಸೆಕ್ಷನ್ 4, 6ಎ, 6ಬಿನಿಂದ 633 ಪ್ರಕರಣಗಳಿಂದ 91900 ರೂ ದಂಡದ ಮೊತ್ತವನ್ನು ಸಂಗ್ರಹಿಸಲಾಗಿದೆ. ಹಾಗೂ ಪೊಲೀಸ್ ಇಲಾಖೆಯಿಂದ 3744 ಪ್ರಕರಣಗಳಿಂದ 365900 ರೂ ದಂಡ ವಸೂಲಿ ಮಾಡಲಾಗಿದೆ. ಸಿಟಿ ಕಾರ್ಪೋರೇಷನ್‌ನಿಂದ 150 ಪ್ರಕರಣಗಳಿಂದ 39000 ರೂ ದಂಡ ವಸೂಲಿ ಮಾಡಲಾಗಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಂಬಾಕು ಮುಕ್ತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಂಬಾಕು ಮುಕ್ತ ಜಿಲ್ಲಾ ಪಂಚಾಯತ್, ತಂಬಾಕು ಮುಕ್ತ ಜಿಲ್ಲಾಡಳಿತ ಭವನ, ತಂಬಾಕು ಮುಕ್ತ ಪೊಲೀಸ್ ಇಲಾಖೆ ಎಂಬ ಪೋಸ್ಟರ್ ಬಿಡುಗಡೆ ಮಾಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯ್ ಕುಮಾರ್ ಎಂ.ಸಂತೋಷ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ,ಡಿ.ಎಚ್.ಓ.ಷಣ್ಮುಖಪ್ಪ, ಡಿ.ಡಿ.ಪಿ.ಐ.ಕೊಟ್ರೇಶ್. ಜಿಜಿಲ್ಲಾ ಸರ್ವೇಕ್ಷಣಾಧಿಕಾರಿ ರಾಘವನ್ ಜಿ.ಡಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾರ್ತಿಕಮಾಸದ ವಿಶೇಷ ಗೌರಿಹಬ್ಬ ತೆರೆ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಕಾರ್ತಿಕ ಮಾಸದ ಹಿನ್ನೆಲೆಯಲ್ಲಿ ಗೋಪನಹಳ್ಳಿ ಗ್ರಾಮದಲ್ಲಿ ಗೌರಿಹಬ್ಬ ಸಂಭ್ರಮ, ಸಡಗರಗಳಿಂದ ನಡೆದು ಮುಕ್ತಾಯವಾಯಿತು.

ಪದ್ದತಿಯಂತೆ ಹುಣ್ಣಿಮೆಯಂದು ಕೆರೆಯ ಮಣ್ಣನ್ನು ತಂದು ಆನೆ ಮೂರ್ತಿಯನ್ನು ಮಣ್ಣಿನಲ್ಲಿ ಸಿದ್ದಪಡಿಸಿ ಅದರ ಮೇಲೆ ಗೌರಿಯ ಮೂರ್ತಿಯನ್ನು ಪ್ರತಿಷ್ಠಾಪಿಸಿ ಹೂಗಳಿಂದ ಅಲಂಕರಿಸಿ ಮಂಗಳವಾದ್ಯಂಗಳೊಂದಿಗೆ ಗ್ರಾಮದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮೂಲಕ ದೇವಸ್ಥಾನ ತಲುಪಲಾಗುತ್ತದೆ. ಗುರುವಾರ ಬೆಳಗ್ಗೆ ಎಂದಿನಂತೆ ಪೂಜಾ ಕಾರ್ಯಗಳ ನಂತರ ಗೌರಿದೇವಿಯ ವಿಸರ್ಜನೆ ಕಾರ್ಯ ನಡೆಯುವುದು.

ಕಳೆದ ಸುಮಾರು 56 ವರ್ಷಗಳಿಂದ ಗ್ರಾಮದಲ್ಲಿ ಗೌರಿಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಲಾಗುತ್ತಿದೆ ಎಂದು ಗ್ರಾಮದ ಮುಖಂಡರು ತಿಳಿಸಿದ್ದಾರೆ.



ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧಮ್ಮತಿಪ್ಪೇಸ್ವಾಮಿ,ಸದಸ್ಯಹರೀಶ್,ಶಾರದಮ್ಮ, ಭವಾನಿಉಮೇಶ್, ಪಿಟಿಎಸ್‌ನಾಗರಾಜ, ದಳಪತಿ ತಮ್ಮೇಗೌಡ, ಶ್ರೀನಿವಾಸ್, ಬಸಣ್ಣ, ತಿಪ್ಪೇಸ್ವಾಮಿ, ನವೀನ್, ಮಂಜುನಾಥ, ಓಂಕಾರಪ್ಪ ಮುಂತಾದವರು ಭಾಗವಹಿಸಿದ್ದರು.

## ಉರ್ದು ಶಿಕ್ಷಕರಿಗೆ ವೃತ್ತಿಪರ ಬುನಾದಿ ತರಬೇತಿ



» ಚಿತ್ರದುರ್ಗ

ನಗರದ ಹೊರಪೇಟೆಯ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಜಿಲ್ಲೆಯ ಉರ್ದು ಪ್ರಾಥಮಿಕ ಪಾಠಶಾಲಾ ಶಿಕ್ಷಕರ 6 ರಿಂದ 8ನೇ ತರಗತಿ ಬೋಧಿಸುತ್ತಿರುವ ವಿಷಯವಾರು ಶಿಕ್ಷಕರಿಗೆ ಐದು ದಿನದ ವೃತ್ತಿಪರ ಬುನಾದಿ ತರಬೇತಿ ನಡೆಯಿತು. ಜಿಲ್ಲೆಯ ಆರು ತಾಲ್ಲೂಕಿನ ಸುಮಾರು 50 ಶಿಕ್ಷಕರು ತರಬೇತಿಯಲ್ಲಿ ಪಾಲ್ಗೊಂಡಿದ್ದರು.ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್, ಶಿಕ್ಷಕರು ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಶಾಸ್ತ್ರ, ಕಲಿಕಾ ಫಲಗಳ ಮಹತ್ವ, ಬುನಾದಿ ಸಾಮರ್ಥ್ಯಗಳು ಭಾಷೆ ಹಾಗೂ ಗಣಿತ ವಿಷಯದ ಬಗ್ಗ ಮಕ್ಕಳಿಗೆ ಅರಿವು ಮೂಡಿಸಬೇಕು ಎಂದರು. ಸರ್ಕಾರಿ ಶಾಲೆಗೆ ಬರುವ ಮಕ್ಕಳು ಬಹಳಷ್ಟು ಬಡವರ ಮಕ್ಕಳಾಗಿದ್ದು, ಅವರಿಗೆ ಉತ್ತಮ ನೈತಿಕ ಮೌಲ್ಯಗಳನ್ನು ಕಲಿಸಬೇಕು. ಭವಿಷ್ಯದಲ್ಲಿ ಉತ್ತಮ ಪ್ರಜೆ ಮಾಡುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ತಿಳಿಸಿದ ಅವರು, ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಿಸಲು 6ನೇ ತರಗತಿಯಿಂದಲೇ ಶ್ರಮಿಸಬೇಕು ಎಂದು ತಿಳಿಸಿದರು. ತರಬೇತಿ ಕಾರ್ಯಾಗಾರದಲ್ಲಿ ನೋಡಲ್ ಅಧಿಕಾರಿ ಸೈಯದ ಸಮೀರ, ಸಿಆರ್‌ಪಿ ಜಾಕೀರ್ ಹಾಗೂ ಮುಹಿಬಹಲ್ಲ ತಬ್ಬರಿಸಿ ಪರ್ವಿನ್ ಆಯಿಷ, ಸಂಪನ್ಮೂಲ ವ್ಯಕ್ತಿಗಳು ಇದ್ದರು.

## ಸಾಂಸ್ಕೃತಿಕ ಸ್ಪರ್ಧೆ: ಹೊಸದುರ್ಗದ ವಿದ್ಯಾರ್ಥಿಗಳು ವಿಭಾಗ ಮಟ್ಟಕ್ಕೆ ಆಯ್ಕೆ

» ಮೊದಲ ಪುಟದಿಂದ

ಭಾವಗೀತೆ : ನಾಗರತ್ನ ಸಿ ಎ, ಪ್ರಥಮ ಸ್ಥಾನ. ಚರ್ಚೆ ಸ್ಪರ್ಧೆ ಕನ್ನಡ: ತೇಜಸ್ವಿನಿ ಬಿ ಅರ್, ಪ್ರಥಮ ಸ್ಥಾನ. ಚರ್ಚೆ ಸ್ಪರ್ಧೆ ಇಂಗ್ಲಿಷ್: ಸಾನಿಯಾ ಫಿರ್ದೋಸ್, ಪ್ರಥಮ ಸ್ಥಾನ.ಚಿತ್ರಕಲೆ :ಮನೋಜ್ ಎ ,ಪ್ರಥಮ ಸ್ಥಾನ. ಏಕಪಾತ್ರಾಭಿನಯ: ಸಂಜನಾ ಆರ್ , ದ್ವಿತೀಯ ಸ್ಥಾನ. ಜನಪದ ಗೀತೆ: ಮಾನ್ಯ ಟಿ, ದ್ವಿತೀಯ ಸ್ಥಾನ.ಪ್ರಬಂಧ ಕನ್ನಡ: ಸಂಧ್ಯಾ ಕೆ, ತೃತೀಯ ಸ್ಥಾನ ಪಡೆದಿರುತ್ತಾರೆ. ವಿಜೇತರಾದ ವಿದ್ಯಾರ್ಥಿಗಳಿಗೆ ಚಿತ್ರದುರ್ಗ ಶಾಲಾ ಶಿಕ್ಷಣ (ಪದವಿ ಪೂರ್ವ) ಉಪನಿರ್ದೇಶಕರು ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಿದರು.

## ಮುದ್ದಾಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಟ್ಯೂಷನ್ ಆರಂಭ

» ಚಿತ್ರದುರ್ಗ

ಹತ್ತನೆ ತರಗತಿ ಮಕ್ಕಳಿಗೆ ಪರೀಕ್ಷೆ ಭಯ ಹೋಗಲಾಡಿಸುವುದಕ್ಕಾಗಿ ಟ್ಯೂಷನ್ ಕ್ಲಾಸ್ ನಡೆಸಲಾಗುತ್ತಿದೆ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ಯೋಜನಾಧಿಕಾರಿ ರವೀಂದ್ರ ಹೇಳಿದರು.

ಮುದ್ದಾಪುರ ಕಾರ್ಯಕ್ಷೇತ್ರದ ಸರ್ಕಾರಿ ಹಿರಿಯ ಪ್ರೌಢಶಾಲೆಯಲ್ಲಿ ಟ್ಯೂಷನ್ ಕ್ಲಾಸ್ ಉದ್ಘಾಟಿಸಿ ಮಾತನಾಡಿದ ರವೀಂದ್ರ ಶ್ರೀಕ್ಷೇತ್ರ ಧರ್ಮಸ್ಥಳದ ಹೇಮಾವತಿ ಹೆಗಡೆರವರ ಆಸೆಯಂತೆ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿ 10 ನೇ ತರಗತಿ ಮಕ್ಕಳಿಗೆ ಟ್ಯೂಷನ್ ಕ್ಲಾಸ್ ಆರಂಭಿಸಲಾಗಿದೆ. ಮಕ್ಕಳಲ್ಲಿ ಪರೀಕ್ಷೆಯ ಭಯ ಹೋಗಲಾಡಿಸುವುದು ಇದರ ಉದ್ದೇಶ. ಹತ್ತನೆ ತರಗತಿಯ ನಂತರ ಮಕ್ಕಳ ಶಿಕ್ಷಣಕ್ಕೆ ನೆರವಾಗುವುದಕ್ಕಾಗಿ ವೃತ್ತಿಪರ ಕೋರ್ಸ್‌ಗಳಿಗೆ ಸುಜ್ಞಾನ ನಿಧಿಯನ್ನು ನೀಡಲಾಗುವುದು. ಅನೇಕ ಶಾಲೆಗಳಿಗೆ ಡೆಸ್ಕ್ ಬೆಂಚಗಳನ್ನು ನೀಡಲಾಗಿದೆ. ಶಿಕ್ಷಕರುಗಳ ಕೊರತೆಯಿರುವ ಶಾಲೆಗಳಿಗೆ ಜ್ಞಾನದೀಪ ಶಿಕ್ಷಕರುಗಳನ್ನು ನೇಮಕ ಮಾಡಲಾಗುತ್ತದೆ. ಇವೆಲ್ಲಾ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳುವಂತೆ ಮಕ್ಕಳಿಗೆ ತಿಳಿಸಿದರು.



## ಪ್ರಮುಖ ಸುದ್ದಿ

# ಬಿ.ಇ.ಡಿ. ಪ್ರಶಿಕ್ಷಣಾರ್ಥಿಗಳ ಬೀಳ್ಕೊಡುಗೆ ಸಮಾರಂಭ

» ಚಿತ್ರದುರ್ಗ

ನಿತ್ಯ ವಿದ್ಯಾರ್ಥಿಯಾಗಿರುವವನೆ ಅತ್ಯುತ್ತಮ ಶಿಕ್ಷಕ. ಕೇವಲ ಪದವಿ ಪಡೆದರೆ ಸಾಲದು. ಶಿಕ್ಷಣದ ಜೊತೆ ಕೌಶಲ್ಯವಿದ್ದಾಗ ಮಾತ್ರ ಬದುಕಿನಲ್ಲಿ ಯಶಸ್ಸು ಕಂಡುಕೊಳ್ಳಬಹುದೆಂದು ನಿವೃತ್ತ ಪ್ರಾಧ್ಯಾಪಕ ಹಾಗೂ ಸಾಹಿತಿ ಪ್ರೊ. ಹೆಚ್.ಎ.ಭಿಕ್ಷಾವರ್ತಿಮಠ್ ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯ, ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಹತ್ತು ಬೆಳದಿಂಗಳ ಸಮಾರೋಪ ಹಾಗೂ ದ್ವಿತೀಯ ಬಿ.ಇ.ಡಿ.

ಪ್ರಶಿಕ್ಷಣಾರ್ಥಿಗಳಿಗೆ ಬೀಳ್ಕೊಡಿಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಪದವಿಧರರೆಲ್ಲಾ ಪ್ರಜ್ಞಾವಂತರಲ್ಲ. ಜನನಾಯಕರೆಲ್ಲಾ ಜನಸೇವಕರಲ್ಲ. ಕೈಯಲ್ಲಿ ಪುಸ್ತಕ ಹಿಡಿದವರೆಲ್ಲಾ ಅಧ್ಯಾಪಕರಲ್ಲ. ಹೃದಯವಿದ್ದವರೆಲ್ಲಾ ಹೃದಯವಂತರಲ್ಲ. ಶಿಕ್ಷಣದ ಪರೀಕ್ಷೆಗಿಂತ ಬದುಕಿನ ಪರೀಕ್ಷೆಯಲ್ಲಿ ಫೇಲಾಗಬಾರದು. ಜೀವನ ಕೌಶಲ್ಯವಿಲ್ಲದವರು ಮಾತ್ರ ಬದುಕಿನಲ್ಲಿ ಫೇಲಾಗುತ್ತಾರೆ. ಪ್ರತಿಯೊಬ್ಬರ ಜೀವನದಲ್ಲಿಯೂ ಒಂದಲ್ಲ ಒಂದು ರೀತಿಯ ಸಮಸ್ಯೆಗಳು ಬರುತ್ತವೆ. ಜಗತ್ತು ದಿನನಿತ್ಯವೂ ಹೊಸ ಅನುಭವ ಕಲಿಸುತ್ತದೆ. ಮಾತಿನಿಂದ ಒಬ್ಬ ವ್ಯಕ್ತಿಯ ವ್ಯಕ್ತಿತ್ವ ಏನೆಂಬುದು ಗೊತ್ತಾಗುತ್ತದೆಯೆಂದರು.



ಮೌನಕ್ಕೆ ದೊಡ್ಡ ಶಕ್ತಿಯಿದೆ. ಮೌನದಿಂದ ವ್ಯಕ್ತಿತ್ವ ಬೆಳೆಯುತ್ತದೆ. ಶಿಕ್ಷಕ ಮಾತ್ರ ಹೃದಯಿಯಾಗಿರಬೇಕು. ವಿದ್ಯಾರ್ಥಿಗಳು ನಿಮ್ಮ ನಡೆ ನುಡಿಯನ್ನು ಗಮನಿಸುತ್ತಿರುತ್ತಾರೆ. ಹಾಗಾಗಿ ನಿಮ್ಮ ವರ್ತನೆ ಕನ್ನಡಿಯಂತಿರಬೇಕೆಂದು ಶಿಕ್ಷಕರಿಗೆ ಕರೆ ನೀಡಿದರು.

ಪಠ್ಯದ ಜೊತೆಗೆ ವಿವೇಕ, ಬುದ್ದಿವಂತಿಕೆ, ಸಾಹಿತ್ಯ ಬದುಕಿಗೆ ನೆರವಾಗುತ್ತದೆ. ಎಲ್ಲಿ ಯಾವಾಗ ಯಾರ ಮುಂದೆ ಏನು ಹೇಗೆ ಮಾತನಾಡಬೇಕೆಂಬ ಸಂಸ್ಕಾರ ಕಲಿಯುವುದು ಜೀವನದ ಒಂದು ಕೌಶಲ್ಯ ಎಂದು ಹೇಳಿದರು.ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮೈಸೂರಿನ ಆಡಳಿತ ವಿಭಾಗದ ಕುಲಸಚಿವ ಪ್ರೊ.ಪ್ರವೀಣ್ ಕೆ.ಬಿ. ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡುತ್ತ ಬಿ.ಇ.ಡಿ. ಶಿಕ್ಷಣ ಮುಗಿಸಿಕೊಂಡು ಹೊರಗೆ ಹೋಗುವ ನೀವುಗಳು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು. ಸದೃಢ ಸಮಾಜ ನಿರ್ಮಿಸುವ ಹೊಣೆಗಾರಿಕೆ ನಿಮ್ಮ ಮೇಲಿರುವುದರಿಂದ ಒಳ್ಳೆಯ ಪ್ರಜೆಗಳನ್ನು ರೂಪಿಸಬೇಕು. ವರ್ತನೆಯನ್ನು ಅಧ್ಯಯನ ಮಾಡುವುದೇ ಮನೋವಿಜ್ಞಾನ. ಜೀವನದಲ್ಲಿ ಆನಂದ ಎನ್ನವುದು ಸುಲಭವಲ್ಲ. ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಕೆ.ಎಂ.ವೀರೇಶ್‌ರವರು ಶೈಕ್ಷಣಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮೈಸೂರು ಡಾಕ್ಟರೇಟ್ ಗೌರವ ನೀಡಿ ಸನ್ಮಾನಿಸಿದೆ. ಮೈಸೂರು ವಿ.ವಿ.ಯಿಂದ ಡಾಕ್ಟರೇಟ್ ಪಡೆದುಕೊಳ್ಳುವುದು ಅಷ್ಟು ಸುಲಭವಲ್ಲ ಎಂದರು.

ಬೀಳ್ಕೊಡುಗೆ ಸಮಾರಂಭದ ಸಾನಿಧ್ಯ ವಹಿಸಿದ್ದ ಕಬೀರಾನಂದಾಶ್ರಮದ ಶಿವಲಿಂಗಾನಂದಸ್ವಾಮಿಗಳು ಆಶೀರ್ವಚನ ನೀಡಿ ಚಿತ್ರದುರ್ಗದಲ್ಲಿ ನಡೆದ ಅಖಿಲ ಭಾರತ 75 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿದ್ದ ಕೆ.ಎಂ.ವೀರೇಶ್‌ರವರು ಸಮ್ಮೇಳನ ಅಚ್ಚುಕಟ್ಟಾಗಿನಡೆಸುವಲ್ಲಿಯಶಸ್ವಿಯಾದರು. ಎಲ್ಲರಿಗೂ ಚಿರಪರಿಚಿತರಾಗಿರುವ ಅವರು ಎಲ್ಲರೊಂದಿಗೆ ಉತ್ತಮ ಒಡನಾಟವಿಟ್ಟುಕೊಂಡಿದ್ದಾರೆಂದು ಗುಣಗಾನ ಮಾಡಿದರು.

ಶಿಕ್ಷಣ ಸಂಸ್ಥೆ ನಡೆಸುವುದೆಂದರೆ ಕಠಿಣವಾದ ಹಾದಿ, ನಾನಾ ಬಗೆಯ ಎಡರು ತೊಡರುಗಳನ್ನು ದಾಟಿಕೊಂಡು ಡಾ.ಕೆ.ಎಂ.ವೀರೇಶ್‌ರವರು 2004 ರಲ್ಲಿ ಆರಂಭಿಸಿದ ಹತ್ತು ಬೆಳದಿಂಗಳ ಕಾರ್ಯಕ್ರಮವನ್ನು ಇಲ್ಲಿಯವರೆಗೂ ನಿರಂತರವಾಗಿ ಮುನ್ನಡೆಸಿಕೊಂಡು ಬರುತ್ತಿರುವುದು ದೊಡ್ಡ ಸಾಧನೆ ಎಂದು ಹೇಳಿದರು.

ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರದ ಪ್ರೊ.ಎಂ.ಆರ್. ಜಯಲಕ್ಷ್ಮಿ ಪ್ರಾಸ್ತಾವಿಕವಾಗಿ ಮಾತನಾಡುತ್ತ ರಂಗ ನಿರ್ದೇಶಕ ಅಶೋಕ್‌ಬಾದರದಿನ್ನಿರವರ ಕನಸಿನ ಕೂಸು ಹತ್ತು ಬೆಳದಿಂಗಳ ಕಾರ್ಯಕ್ರಮ 2004 ರಲ್ಲಿ ರೂಪಿಸಲಾಯಿತು. ಪಠ್ಯೇತರ ಚಟುವಟಿಕೆಳನ್ನು ವಿದ್ಯಾರ್ಥಿಗಳು ವ ಾತನಾಡುವಂತಾಗಬೇಕೆನ್ನುವುದು ಇದರ ಉದ್ದೇಶ. ಶಿಕ್ಷಕರು ಅಭಿನಯದ ಕಲೆ ಕಲಿಯುವಂತ ಅವಕಾಶವನ್ನು ಬಾಪೂಜಿ ಶಿಕ್ಷಣ ಮಹಾವಿದ್ಯಾಲಯ ಕಲ್ಪಿಸಿದೆ. ಕೌಶಲ್ಯ ಬದುಕಿಗೆ ಮುಖ್ಯ. ಕೌಶಲ್ಯವುಳ್ಳ ಶಿಕ್ಷಕರು ಮನೆಯಲ್ಲಿ ಕೂರುವುದಿಲ್ಲ ಎಂದರು.

## ಫಾಸ್ಟ್ ನ್ಯೂಸ್

### ಅಬಕಾರಿ ಅಧಿಕಾರಿಗಳ ಕಾರ್ಯಚರಣೆ: ಅಕ್ರಮ ಮದ್ಯ ಸಾಗಾಟ ಮಾಡುತ್ತಿದ್ದ ವ್ಯಕ್ತಿ, ವಾಹನ ವಶ



» ಚಳ್ಳಕೆರೆ

ಚಳ್ಳಕೆರೆ ತಾಲ್ಲೂಕು ಅಬಕಾರಿ ಉಪನಿರೀಕ್ಷಕರು ಹಾಗೂ ನಿರೀಕ್ಷಕರು ಭಾನುವಾರ ಮಧ್ಯಾಹ್ನ ಎಂದಿನಂತೆ ಬಳ್ಳಾರಿ ರಸ್ತೆಯ ನಾಯಕನಹಟ್ಟಿ ಕ್ರಾಸ್‌ಬಳಿ ವಾಹನ ತಪಾಸಣೆ ನಡೆಸುವ ಸಂದರ್ಭದಲ್ಲಿ ದೇವರಹಟ್ಟಿಯ ಚನ್ನಯ್ಯ(60) ಎಂಬ ವ್ಯಕ್ತಿ ತನ್ನ ಟಿವಿಎಸ್ ವಾಹನದಲ್ಲಿ ಅಬಕಾರಿ ನಿಯಮ ಉಲ್ಲಂಘಿಸಿ ಸುಮಾರು 3600 ಲೀಟರ್ ಮದ್ಯವನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದು, ವಾಹನ ಸಮೇತ ಆತನನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಲಾಗಿದೆ ಎಂದು ತಿಳಿದು ಬಂದಿದೆ. ಕಾರ್ಯಚರಣೆಯಲ್ಲಿ ಅಬಕಾರಿ ನಿರೀಕ್ಷಕ ಸಿ.ನಾಗರಾಜು, ಟಿ.ರಂಗಸ್ವಾಮಿ, ಎನ್.ನಾಗರಾಜು, ಸಿಬ್ಬಂದಿ ಟಿ.ಸೋಮಶೇಖರ್, ದರ್ಶನ್‌ಕುಮಾರ್ ಮುಂತಾದವರು ಭಾಗವಹಿಸಿದ್ದರು.

### 18 ವರ್ಷ ತುಂಬಿದ ವಿದ್ಯಾರ್ಥಿಗಳಿಗೆ ಮತದಾನದ ಹಕ್ಕು: ತಹಶೀಲ್ದಾರ್



» ಚಳ್ಳಕೆರೆ

18ವರ್ಷ ತುಂಬಿದ ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆಮಾಡಿಕೊಳ್ಳಬೇಕು. ಸೂಕ್ತದಾಖಲೆ ನೀಡಿ ಸೇರ್ಪಡೆಯಾಗುವಂತೆ ತಹಶೀಲ್ದಾರ್ ರೇಹಾನ್‌ಪಾಷ ಮನವಿ ಮಾಡಿದರು.

ಅವರು, ಶನಿವಾರ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಮತದಾರರ ಸಾಕ್ಷರತಾ ಕ್ಲಬ್‌ವತಿಯಿಂದ ಹಮ್ಮಿಕೊಂಡಿದ್ದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಚುನಾವಣಾ ಆಯೋಗ, ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಕ್ಷೇತ್ರದ 18 ವರ್ಷಕ್ಕೆ ಕಾಲಿಟ್ಟ ಎಲ್ಲಾ ವಿದ್ಯಾರ್ಥಿಗಳನ್ನು ಮತದಾರರ ಪಟ್ಟಿಗೆ ಸೇರ್ಪಡೆಮಾಡಿಕೊಳ್ಳಲಾಗುವುದು ಎಂದರು. ಕಾಲೇಜಿನ ಮತದಾರರ ಸಾಕ್ಷರತಾ ಕ್ಲಬ್ ಸಹಾಯಕ ನೋಡಲ್ ಅಧಿಕಾರಿ ಎಚ್.ಆರ್.ಜಬೀವುಲ್ಲಾ ಮಾತನಾಡಿ, ನಮ್ಮ ಕಾಲೇಜಿನಲ್ಲಿ ಸುಮಾರು 400ಕ್ಕೂ ಹೆಚ್ಚು ವಿದ್ಯಾರ್ಥಿಗಳು 18ವರ್ಷ ತುಂಬಿದ್ದು ಅವರೆಲ್ಲರನ್ನೂ ಮತದಾರರ ಪಟ್ಟಿಗೆ ಸೇರ್ಪಡೆಮಾಡಿಕೊಳ್ಳಲಾಗುವುದು. ಈಗಾಗಲೇ ಎಲ್ಲಾ ದಾಖಲೆಗಳ ಪರಿಶೀಲನೆ ನಡೆಯುತ್ತಿದೆ. ಈ ಕಾರ್ಯಕ್ರಮಕ್ಕೆ ತಹಶೀಲ್ದಾರ್ ಆಗಮಿಸಿ ಚಾಲನೆ ನೀಡಿದ್ದು, ಕಾಲೇಜಿನಪರವಾಗಿ ಅಭಿನಂದಿಸುವ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಕೆ.ತಿಮ್ಮಯ್ಯ ಮಾತನಾಡಿ, ಯುವ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗಬಾರದು. ಸಂವಿಧಾನ ನೀಡಿದ ಹಕ್ಕನ್ನು ಚಲಾವಣೆ ಮಾಡುವಲ್ಲಿ ಯುವಕರು ಹಿಂದುಳಿಯಬಾರದು. ಮತದಾನ ಜಾಗೃತಿ ಅಭಿಯಾನದ ಮೂಲಕ ಅರ್ಹ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿಕೊಳ್ಳುವ ಕಾರ್ಯವನ್ನು ಸಾಕ್ಷರತ ಕ್ಲಬ್ ಮಾಡುತ್ತಿದೆ ಎಂದರು. ಉಪನ್ಯಾಸಕ ನಾಗರಾಜಬೆಳಗಟ್ಟ, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಹಭಿಬುಲ್ಲಾ, ಜಾನಕಮ್ಮ, ಚಂದ್ರಶೇಖರ್, ಚುನಾವಣಾ ಇಲಾಖೆ ಸಿಬ್ಬಂದಿಯಾದ ಪುಷ್ಪಲತಾ, ಓಬಳೇಶ್, ಹಸೀನಾಭಾನು ಮುಂತಾದವರು ಉಪಸ್ಥಿತರಿದ್ದರು.

### ವಿಕಲಚೇತನರಿಗೆ ಸ್ಪರ್ಧೆ

» ದಾವಣಗೆರೆ

ವಿಶ್ವ ವಿಕಲಚೇತನರ ದಿನಾಚರಣೆ–2024ರ ಪ್ರಯುಕ್ತ ನ.26 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಗುಂಡಿ ಸರ್ಕಲ್ ಹತ್ತಿರವಿರುವ ಮೋತಿ ವೀರಪ್ಪ ಕಾಲೇಜು ಮೈದಾನದಲ್ಲಿ ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಮಹಿಳಾ ಮತ್ತು ಪುರುಷರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳನ್ನು ನಡೆಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ದಾವಣಗೆರೆ ದೂ.ಸಂ: 08192–263936 ನ್ನು ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ॥ ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

# ಪ್ರತಿಯೊಬ್ಬ ಮನುಷ್ಯನಲ್ಲಿ ಅಸಾಧಾರಣ ಶಕ್ತಿ ಇದೆ



» ಚಿತ್ರದುರ್ಗ

ಪ್ರತಿಯೊಬ್ಬ ಮನುಷ್ಯನಲ್ಲಿ ಅಸಾಧಾರಣ ಶಕ್ತಿ ಇದೆ ಅದನ್ನು ಅರಿತು ಈ ಜಗತ್ತಿಗೆ ಸಾಧಿಸಿ ತೋರಿದವರು ಮಹಾನ್ ಸಾಧಕರಾಗುತ್ತಾರೆ ಎಂದು ಮುರುಘಾ ಮಠದ ಡಾ.ಬಸವಪ್ರಭು ಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀ ಬೃಹನ್ಮಠ ಸಂಯುಕ್ತ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ 2024– 25 ನೇ ಸಾಲಿನ ಚಿತ್ರದುರ್ಗ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಆಶೀರ್ವಚನ ನೀಡಿ ಮನುಷ್ಯ ಬದುಕುವುದು ಬರೀ ಆಹಾರಕ್ಕಾಗಿ, ಅಧಿಕಾರಕ್ಕಾಗಿ, ಅಂತಸ್ತಿಗಾಗಿ ಅಲ್ಲ ಹುಟ್ಟಿದ ಮೇಲೆ ಏನನ್ನಾದರೂ ಸಾಧಿಸಬೇಕು ಎಂಬ ಛಲದೊಂದಿಗೆ ಬದುಕಿದಾಗ ಬದುಕು ಸಾರ್ಥಕವಾಗುತ್ತದೆ ಎಂದರು.

ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಆರ್. ಪುಟ್ಟಸ್ವಾಮಿ ಮಾತಾನಾಡಿ ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಗಳನ್ನು ಹೊರ ಸೂಸಲು ಇಂತಹ ವೇದಿಕೆಗಳು ಹೆಚ್ಚು ಸಹಕಾರಿಯಾಗುತ್ತವೆ. ನಿರ್ಣಾಯಕರು ಪೂರ್ವಗ್ರಹ ಪೀಡಿತರಾಗದೆ ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗಳನ್ನು ಗುರುತಿಸಿ ಅವರನ್ನು ಪ್ರೋತ್ಸಾಹಿಸಬೇಕಾಗಿದೆ ಎಂದರು.

ಚಿತ್ರದುರ್ಗ ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ಬಿ. ಆರ್. ಮಲ್ಲೇಶ್ ಮಾತನಾಡಿ ಹಲವು ವಿದ್ಯಾರ್ಥಿಗಳು ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಿಂದ ದೂರ ಉಳಿದಿದ್ದಾರೆ. ಪೋಷಕರು ತಮ್ಮ ಮಕ್ಕಳನ್ನು ಬುದ್ಧಿವಂತರನ್ನಾಗಿಸುವ ಭರದಲ್ಲಿ ಕೇವಲ ಅಂಕಗಳ ಸ್ಪರ್ಧೆಗೆ ನಿಲ್ಲಿಸಿ ಮಕ್ಕಳನ್ನು ಪುಸ್ತಕದ ಹುಳುಗಳನ್ನಾಗಿಸಿದ್ದಾರೆ. ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಮಕ್ಕಳು ಉತ್ತಮ ಹವ್ಯಾಸಗಳನ್ನು ರೂಡಿಸಿಕೊಂಡು ಕಲಿಕೆಯಲ್ಲಿ ಏಕಾಗ್ರತೆ ಸಾಧಿಸಿ ಹೆಚ್ಚು ಅಂಕಗಳನ್ನು ಗಳಿಸಲು ಸಫಲರಾಗುತ್ತಾರೆ ಎಂಬ ಸತ್ಯವನ್ನು ಪೋಷಕರು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

ಬೃಹನ್ಮಠ ಕಾಲೇಜಿನ ಪ್ರಾಂಶುಪಾಲರಾದ ಪಿ.ಎಂ.ಜಿ ರಾಜೇಶ್ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ ಎಲೆಮರೆ ಕಾಯಿಯಂತಿರುವ ಪ್ರತಿಭಾವಂತರನ್ನು ಗುರುತಿಸಲು ಇಂತಹ ಕಾರ್ಯಕ್ರಮಗಳನ್ನು ಹೆಚ್ಚು ಆಯೋಜಿಸಬೇಕು ಅಂದಾಗ ಮಾತ್ರ ಕಲೆ ಮತ್ತು ಸಂಸ್ಕೃತಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಹಿರಿಯ ಪ್ರಾಂಶುಪಾಲರಾದ ಕೆ.ತಿಮ್ಮಯ್ಯ, ಲೋಕೇಶ್, ಇ.ಗುರುಮೂರ್ತಿ, ಪ್ರಾಂಶುಪಾಲರ ಸಂಘದ ಅಧ್ಯಕ್ಷ ಎಸ್.ದೇವೇಂದ್ರಪ್ಪ, ಕಾರ್ಯದರ್ಶಿ ಆರ್.ಮುಸ್ತಫ, ಅನುದಾನಿತ ನೌಕರರ ಸಂಘದ ಅಧ್ಯಕ್ಷ ಜಿ.ಎಸ್. ತಿಪ್ಪೇಸ್ವಾಮಿ, ಸಹ ಕಾರ್ಯದರ್ಶಿ ನಾಗರಾಜ್ ಬೆಳಗಟ್ಟ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಪಿ.ಯು.ವರ್ಷ ಪ್ರಾರ್ಥಿಸಿದರು, ಸಾಂಸ್ಕೃತಿಕ ವೇದಿಕೆ ಅಧ್ಯಕ್ಷರಾದ ಬಿ.ಗೋವಿಂದಪ್ಪ ಪ್ರಾಸ್ತಾವಿಕ ನುಡಿಗಳನ್ನಾಡಿದರು, ಉಪನ್ಯಾಸಕ ಪಿ.ಉಮಾಶಂಕರ್ ಸ್ವಾಗತಿಸಿದರು, ಉಪನ್ಯಾಸಕ ಶಿವಕುಮಾರ್ ವಂದಿಸಿದರು. ಉಪನ್ಯಾಸಕಿ ಶ್ರೀಮತಿ ಮೀರಾ ನಾಡಿಗ್ ಕಾರ್ಯಕ್ರಮ ನಿರ್ವಹಣೆ ಮಾಡಿದರು.

# ಜನರಿಗೆ ರಕ್ತದಾನ ಮಾಡುಲು ಸ್ವಾಮೀಜಿ ಕರೆ




» ಚಿತ್ರದುರ್ಗ

ರಕ್ತವನ್ನು ಕೃತಕವಾಗಿ ತಯಾರು ಮಾಡಲು ಬರುವುದಿಲ್ಲ, ಅಲ್ಲದೆ ಯಾವ ಪ್ರಾಣಿಗಳ ರಕ್ತವನ್ನು ಸಹಾ ಮಾನವನಿಗೆ ಹಾಕಲು ಬರುವುದಿಲ್ಲ ಈ ಹಿನ್ನಲೆಯಲ್ಲಿ ಮಾನವ ರಕ್ತವನ್ನು ಮಾನವನಿಗೆ ಮಾತ್ರ ಹಾಕಲು ಬರುತ್ತದೆ ಇದರಿಂದ ರಕ್ತವನ್ನು ದಾನ ಮಾಡಲು ಮುಂದಾಗುವುಂತೆ ನಗರದ ಕಭೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ಕರೆ ನೀಡಿದರು.

ವಿಶ್ವ ಹಿಂದೂ ಪರಿಷತ್, ಭಜರಂಗ ದಳ ಹಾಗೂ ವಿಶ್ವ ಹಿಂದೂ ಪರಿಷತ್ ವೀರ ಮದಕರಿ ಸೇವಾ ಟ್ರಸ್ಸ್ ವತಿಯಿಂದ ಅಯೋಧ್ಯ ಬಲಿದಾನ ದಿವಸ್ ಅಂಗವಾಗಿ ನಗರದ ವಿ.ಪಿ.ಬಡಾವಣೆಯಲ್ಲಿನ ವಿಶ್ವ ಹಿಂದೂ ಪರಿಷತ್ ಕಾರ್ಯಾಲಾಯದಲ್ಲಿ ಶನಿವಾರ ರಕ್ತದಾನ ಶಿಬಿರದಲ್ಲಿ ತಾಯಿ ಭಾರತಾಂಭೆ ಹಾಗೂ ಅಂಜನೇಯ ಸ್ವಾಮಿಯ ಭಾವಚಿತ್ರಕ್ಕೆ ಪುಷ್ಪ ನಮನಸಲ್ಲಿಸಿ ಮಾತನಾಡಿದ ಶ್ರೀಗಳು ಹೆರಿಗೆ, ಅಪಘಾತ, ಶಸ್ರಚಿಕಿತ್ಸೆ ನಡೆಸುವಾಗ ಮಾನವನಿಗೆ ರಕ್ತದ ಅವಶ್ಯಕತೆ ಬಹಳ ಇರುತ್ತದೆ, ಈ ಹಿನ್ನಲೆಯಲ್ಲಿ ಸರ್ಕಾರ ಮತ್ತು ಖಾಸಗಿಯಾಗಿ ರಕ್ತ ನಿಧಿ ಕೇಂದ್ರಗಳು ಕೆಲಸವನ್ನು ಮಾಡುತ್ತಿವೆ ಮಾನವನಿಗೆ ಅಗತ್ಯವಾದ ರಕ್ತವನ್ನು ಸಂಗ್ರಹ ಮಾಡಿ ಅವಶ್ಯಕತೆ ಇರುವವರಿಗೆ ನೀಡುವ ಕಾರ್ಯವನ್ನು ಮಾಡಲಾಗುತ್ತದೆ. ಇದಕ್ಕೆ ನಾವೆಲ್ಲ ಸಹಕಾರವನ್ನು ನೀಡಬೇಕಿದೆ ಎಂದರು.

ರಕ್ತವನ್ನು ಕೃತಕವಾಗಿ ಮಾಡಲು ಸಾಧ್ಯವಿಲ್ಲ ಎಷ್ಟೆ ಅದರೂ ಸಹಾ ಅದನ್ನು ಮಾನವರಿಂದಲೇ ಪಡೆಯಬೇಕಿದೆ. ಇದನ್ನು ಬಿಟ್ಟು ಯಾವ ಪ್ರಾಣಿಗಳಿಂದಲೂ ಸಹಾ ಸಾಧ್ಯವಿಲ್ಲ, ಈ ಹಿನ್ನಲೆಯಲ್ಲಿ ತಮ್ಮ ಮನೆಗಳಲ್ಲಿಒ ವಿವಿಧ ರೀತಿಯ ಕಾರ್ಯಕ್ರಮಗಳು ಇದ್ದಾಗ ಅದರ ಅಂಗವಾಗಿ ರಕ್ತವನ್ನು ದಾನ ಮಾಡುವ ಸಂಪ್ರದಾಯವನ್ನು ಬೆಳಸಿಕೊಂಡರೆ ಬೇರೆಯವರಿಗೆ ಅನುಕೂಲವಾಗಲಿದೆ ಎಂದ ಶ್ರೀಗಳು ಈ ಸಂಸ್ಥೆಯು ಉತ್ತಮವಾದ ಜನಪಯೋಗಿ ಕಾರ್ಯವನ್ನು ಮಾಡುತ್ತಿದೆ, ರಕ್ತವನ್ನು ದಾನಿಗಳಿಂದ ಸಂಗ್ರಹ ಮಾಡಿ ಬೇರೆಯವರಿಗೆ ನಿಡುವ ಕಾರ್ಯ ಉತ್ತಮವಾಗಿದೆ ಇದೆ ರೀತಿ ಬೇರೆ ಸಂಘ ಸಂಸ್ಥೆಗಳು ಸಹಾ ಮಾಡುವುದರ ಮೂಲಕ ಮಾದರಿಯಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸುಮಾರು 30 ಯೂನಿಟ್ ರಕ್ತವನ್ನು ದಾನ ಮಾಡಲಾಯಿತು..ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪತರಿಷತ್‌ನ ಉಪಾಧ್ಯಕ್ಷರಾದ ಮಂಜುನಾಥ್, ಜಂಟಿ ಕಾರ್ಯದರ್ಶಿಗಳಾದ ವಿಠಲ್, ಚನ್ನಕೇಶವ, ನಗರ ಕಾರ್ಯದರ್ಶಿ ಆಶೋಕ್, ನಗರ ಸಹ ಕಾರ್ಯದರ್ಶಿ ರಂಗನಾಥ್, ಜಿಲ್ಲಾ ಸೇವಾ ಪ್ರಮುಖ್ ರಘುನಾಥ್, ನಗರ ಸಂಯೋಜಕರಾದ ಕೇಶವ, ರಾಜು, ವಿನಯಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು.




ಚಳ್ಳಕೆರೆ ನಗರದ ಚಿಗುರು ಈ–ಕಿಡ್ಸ್ ಪ್ರೀ ಸ್ಕೂಲ್‌ನಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಚರಿಸಲಾಯಿತು. ಪುಟಾಣಿ ಮಕ್ಕಳಿಗೆ ಕನ್ನಡದ ಬಗ್ಗೆ ಸ್ಪರ್ಧೆಗಳು ಏರ್ಪಡಿಸಿದ್ದರು. ಕಾರ್ಯದರ್ಶಿ ಜೆ.ಸಿ.ಶಶಿಕುಮಾರ್, ಸ್ಫೂರ್ತಿ, ಪುಷ್ಪ, ಲಕ್ಷ್ಮಿ ಮೊದಲಾದವರು ಇದ್ದರು.

## ಕನ್ನಡಕ್ಕೆ ಮೊದಲ ಪ್ರಾಶಸ್ತ್ಯ ನೀಡಿ



» ಚಿತ್ರದುರ್ಗ

ಕನ್ನಡಿಗರು ಎಷ್ಟೇ ಭಾಷೆಗಳನ್ನು ಕಲಿತರೂ ಕನ್ನಡಕ್ಕೆ ಮೊದಲ ಪ್ರಾಶಸ್ತ್ಯ ನೀಡಬೇಕು. ಭಾರತದ ನೆಲದಲ್ಲಿ ಕನ್ನಡ ಭಾಷೆಗೆ ತನ್ನದೇ ಆದ ವಿಶಿಷ್ಟ ಸ್ಥಾನಮಾನವಿದೆ ಎಂದು ಲೇಖಕ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ ಅಭಿಪ್ರಾಯಪಟ್ಟರು.

ನಗರದ ತುರುವನೂರು ರಸ್ತೆಯಲ್ಲಿರುವ ಕೆ.ಕೆ. ನ್ಯಾಷನಲ್ ಆಂಗ್ಲ ಹಿರಿಯ ಹಾಗೂ ಪ್ರೌಢಶಾಲೆ ಚಿತ್ರದುರ್ಗ ಇಲ್ಲಿ ಹಮ್ಮಿಕೊಳ್ಳಲಾಗಿದ್ದ ಕನ್ನಡ ರಾಜ್ಯೋತ್ಸವ ಮತ್ತು ದಿ:9/11/24 ರಂದು ನಡೆದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಲೇಖಕ ಯೋಗೀಶ್ ಸಹ್ಯಾದ್ರಿ ಅವರು, ಕನ್ನಡಿಗರಿಗೆ ಕನ್ನಡ ಭಾಷೆಯೆ ಸ್ವರ್ಗ ಹಾಗೂ ಹಬ್ಬವಿದ್ದಂತೆ. ಆದರೆ ಕನ್ನಡ ಮಾತೃಭಾಷೆಯು ಉದ್ಯೋಗದ ಭಾಷೆಯಾಗುವಂತೆಯೂ ಸರ್ಕಾರ ಮತ್ತು ಸಾಹಿತಿಗಳು, ಕನ್ನಡ ಪ್ರೇಮಿಗಳು ಕಾರ್ಯಗತರಾಗಬೇಕು ಎಂದು ಅಭಿಪ್ರಾಯಪಟ್ಟರು. ಕನ್ನಡದ ಮಕ್ಕಳ ಪ್ರೇಮವನ್ನು ಮಾತಿನಲ್ಲಿ ಬಣ್ಣಿಸಲಾಗದು ಎಂದು ಹೇಳುತ್ತಾ, ಕನ್ನಡ ಭಾಷೆಯ ಇತಿಹಾಸ, ಪ್ರಾಮುಖ್ಯತೆ, ಕವಿಗಳು, ಕವಿವಾಣಿಗಳು, ಬಸವಣ್ಣ, ಕನಕದಾಸರು ಮೊದಲಾದ ಕವಿ ಶ್ರೇಷ್ಠರನ್ನು ನೆನಪಿಸಿಕೊಂಡರು. ನಾವು ವ್ಯವಹರಿಸಲು ಮತ್ತು ಬದುಕಲು ಎಷ್ಟೇ ಭಾಷೆಗಳನ್ನು ಕಲಿಯಬಹುದು. ಆದರೆ ಕನ್ನಡಿಗನಾಗಿರುವುದಕ್ಕೆ ಹೆಮ್ಮೆ ಪಡಬೇಕು ಎಂದು ಮಕ್ಕಳಿಗೆ, ಪೋಷಕರಿಗೆ, ಶಿಕ್ಷಕರಿಗೆ ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ॥ ಹೆಚ್. ಆರ್. ಮಂಜುನಾಥ್ ರವರು ಎಷ್ಟೇ ದೇಶ ವಿದೇಶ ಸುತ್ತಿದರೂ ಭಾರತೀಯನಾಗಿ, ಕನ್ನಡಿಗನಾಗಿ ಹೆಮ್ಮೆ ಇದೆ, ಮಕ್ಕಳ ಪ್ರತಿಭೆಯನ್ನು ಗುರುತಿಸುವುದಕ್ಕೆ ಇದು ಒಂದು ವೇದಿಕೆ ಎಂದರು. ಆಡಳಿತ ಅಧಿಕಾರಿ ಶ್ರೀಯುತ ಕಾರ್ತಿಕ್ ರವರು ಪ್ರಬಂಧ ಸ್ಪರ್ಧೆಯ ರೂಪು–ರೇಷೆಗಳನ್ನು ವಿವರಿಸಿ ವಿಜೇತರಾದವರನ್ನು ಘೋಷಿಸಿದರು. ಶ್ರೀಮತಿ ಸುಶೀಲಾ ಕಾರ್ಯಕ್ರಮ ನಿರೂಪಿಸಿದರು, ಪ್ರಾರ್ಥನೆ ಶ್ರೀಮತಿ ಲಾವಣ್ಯ ಅವರದು, ಸ್ವಾಗತವನ್ನು ಶ್ರೀಮತಿ ರೂಪಿಣಿ ನೆರವೇರಿಸಿದರು. ವಂದನಾರ್ಪಣೆಯನ್ನು ಶ್ರೀಮತಿ ವಿಜಯಲಕ್ಷ್ಮಿ ನೆರವೇರಿಸಿದರು.

ಮೊದಲ ಬಹುಮಾನ – ಆಧ್ಯಾ (ತರಳಬಾಳು), ಎರಡನೆಯ ಬಹುಮಾನ–ಜಯಶ್ರೀ (ಸಂತ ಜೋಸೆಫರ ಶಾಲೆ), ತೃತೀಯ ಬಹುಮಾನ – ಬೇಬಿ.ಆರ್ ( ಕೆ.ಕೆ.ನ್ಯಾಷನಲ್ ಆಂಗ್ಲ ಹಿರಿಯ ಹಾಗೂ ಪ್ರೌಢಶಾಲೆ) ಹಾಗೂ ಆಧ್ಯಾ ಕೌಸರ್ ( ಸಂತ ಜೋಸೆಫರ ಶಾಲೆ), ಇವರಿಗೆ ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನ ನೀಡಿ ಗೌರವಿಸಲಾಯಿತು.

## ಪ್ರಮುಖ ಸುದ್ದಿ

# ಸಂಚಾರ ನಿಯಮ ಜಾಗೃತಿ ಜಾಥ ನಿಯಮಗಳ ಪಾಲನೆ ಮೂಲಕ ಅಪಘಾತಗಳಿಂದ ಪಾರಾಗಿ: ಪಿಎಸ್‌ಐ ಸಲಹೆ





ಚಳ್ಳಕೆರೆ

ರಸ್ತೆಯಲ್ಲಿ ನಡೆಯುವಾಗ ಪ್ರತಿಯೊಬ್ಬರೂ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸ ಬೇಕು, ಇಲ್ಲವಾದಲ್ಲಿ ಅಪಾಯಕ್ಕೆ ನಾವೇ ಆಹ್ವಾನ ಕೊಟ್ಟಂತಾಗುತ್ತದೆ. ವಿಶೇಷವಾಗಿ ಶಾಲಾ ವಿದ್ಯಾರ್ಥಿಗಳು ರಸ್ತೆದಾಟುವಾಗ, ಬೈಸಿಕಲ್ ಮತ್ತು ದ್ವಿಚಕ್ರವಾಹನದಲ್ಲಿ ಚಲಿಸುವಾಗ ವಾಹನವನ್ನು ನಿಯಮಗಳನ್ನು ಉಲ್ಲಂಘಿಸಿದರಲ್ಲಿ ಅಪಾಯ ಕಟ್ಟಿಟ್ಟಬುತ್ತಿ. ಆದ್ದರಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಅಪಘಾತ ಮತ್ತು ಅಪಾಯಗಳಿಂದ ರಕ್ಷಣೆ ಪಡೆಯಬೇಕೆಂದು ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ತಿಳಿಸಿದರು.


ಅವರು, ನಗರದ ಲಿಟ್ಲಪ್ಲವರ್ ಶಾಲೆಯ ಆಡಳಿತಮಂಡಳಿ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ವಿದ್ಯಾರ್ಥಿಗಳು ಸಂಚಾರಿ ನಿಯಮಗಳ ಬಗ್ಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಪ್ರಾತ್ಯಕ್ಷತೆಯೊಂದಿಗೆ ವಿದ್ಯಾರ್ಥಿಗಳಿಗೆ ಅಪಘಾತಗಳ ನಿಯಂತ್ರಣದ ಬಗ್ಗೆ ಮಾಹಿತಿ ನೀಡಿದರು. ವಿಶೇಷವಾಗಿ ದ್ವಿಚಕ್ರವಾಹನಗಳಲ್ಲಿ ಚಲಿಸುವಾಗ ಕಡ್ಡಾಯವಾಗಿ ಹೆಲ್ಮೇಟ್ ಧರಿಸಬೇಕು, ವಾಹನವನ್ನು ರಸ್ತೆಯ ತಿರುವಿನಲ್ಲಿ ಚಲಾಯಿಸುವಾಗ ಇತರೆ ವಾಹನಗಳ ಬಗ್ಗೆ ಗಮನಹರಿಸಬೇಕು. ಕೆಲವು ಸಂದರ್ಭಗಳಲ್ಲಿ ಅಪಘಾತಗಳು ನಮ್ಮಿಂದ ಆಗುವ ತಪ್ಪುಗಳಿಂದ ಹೆಚ್ಚಾಗುತ್ತವೆ. ನಾವೆಲ್ಲರೂ ಸರ್ಕಾರದ ಸಂಚಾರಿ ನಿಯಮಗಳನ್ನು ಚಾಚೂತಪ್ಪದೆ ಪಾಲಿಸಿದಲ್ಲಿ ಮಾತ್ರ ರಕ್ಷಣೆ ದೊರೆಯುತ್ತದೆ. ಅದೇ ರೀತಿ ಸರ್ಕಾರಕ್ಕೆ ದಂಡ ಪಾವತಿಮಾಡುವುದು ತಪ್ಪುತ್ತದೆ ಎಂದರು. ಆಡಳಿತಮಂಡಳಿ ನಿರ್ದೇಶಕರಾದ ಎಂ.ಸಂತೋಷ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಅಪಘಾತಗಳ ಸಂಖ್ಯೆ ದಿನದಿಂದದಿನಕ್ಕೆ ಹೆಚ್ಚಾಗುತ್ತಿದೆ. ವಿಶೇಷವಾಗಿ ವಿದ್ಯಾರ್ಥಿಗಳು ಹಾಗೂ ಪೋಷಕರು ಶಾಲೆಗೆ ಬರುವ ಆತುರದಲ್ಲಿ ನಿಯಮಗಳ ಉಲ್ಲಂಘನೆಯಾಗುವುದು ಸ್ವಾಭಾವಿಕ. ನಿಯಮ ಉಲ್ಲಂಘಿಸಿದರೆ ಅಪಾಯವೂ ಸಹ ನಮ್ಮ ಬೆನ್ನಹಿಂದೆ ಇರುತ್ತದೆ. ಆದ್ದರಿಂದ ಜಾಗ್ರತೆ ವಹಿಸಬೇಕು. ಪೊಲೀಸ್ ಇಲಾಖೆ ನೀಡಿದ ಸಂಚಾರಿನಿಯಮ ಮಾಹಿತಿಯನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಆಡಳಿತಮಂಡಳಿ ನಿರ್ದೇಶಕರಾದ ಮಂಜುನಾಥರೆಡ್ಡಿ, ರೇಖಾ, ನಟರಾಜು, ಮುಖ್ಯ ಶಿಕ್ಷಕರಾದ ಪಿ.ಮಮತ, ಎನ್.ಮಂಜುನಾಥ, ಶಿಕ್ಷಕರಾದ ತಿಪ್ಪೇಸ್ವಾಮಿ, ಅಭಿಲಾಷ್, ಜಯಪ್ರಕಾಶ್, ಕಾವ್ಯ, ಮಹಂತೇಶ್, ಮಹಾಲಕ್ಷ್ಮಿ, ಹನುಮಂತರಾಯ, ಲಕ್ಷ್ಮಿ, ಯಶಸ್ವಿನಿ, ಭಾರತಿ, ವಿ.ಕಮಲ, ಗೌತಮಿ, ರಾಧ ಮುಂತಾದವರು ಭಾಗವಹಿಸಿದ್ದರು.

ನಮ್ಮ ಜನ
NAMMA JANA
25–11–2024 ಸೋಮವಾರ
25-11-2024 Monday


# ಸಂವಿಧಾನ




## ಈ ನೆಲದ ಸಾಂಸ್ಕೃತಿಕ ವ್ಯಕ್ತಿತ್ವ....... ನವೆಂಬರ್ 26... ಕಾನೂನು ದಿನ ಈಗ – ಸಂವಿಧಾನ ದಿನ............

### ಸಂವಿಧಾನ ಎಂದರೇನು ?

ಅದೊಂದು ಸಂಸ್ಕೃತಿಯೇ ? ಸಂಪ್ರದಾಯವೇ ? ಪದ್ದತಿಯೇ ? ಸಿದ್ಧಾಂತವೇ ? ಆಚರಣೆಯೇ ?

ನೀತಿ ನಿಯಮಗಳೇ ? ಬದುಕೇ ?

ಜೀವನ ವಿಧಾನವೇ ? ರಕ್ಷಾ ಕವಚವೇ ? ಮಾರ್ಗಸೂಚಕಗಳೇ ?

ನಾಗರಿಕ ಮಾನದಂಡಗಳೇ ? ಧರ್ಮದ ಮುಂದುವರಿದ ಭಾಗವೇ ? ಅನಿವಾರ್ಯ ಹಕ್ಕು ಮತ್ತು ಕರ್ತವ್ಯಗಳೇ ? ದುಷ್ಟರಿಗೆ ಶಿಕ್ಷೆ ಶಿಷ್ಟರಿಗೆ ರಕ್ಷಣೆಯ ಸೂತ್ರಗಳೇ ? ಸ್ವಾತಂತ್ರ್ಯ – ಸಮಾನತೆಯ ಲಕ್ಷಣಗಳೇ ? ಮಾನವೀಯ ಮೌಲ್ಯಗಳೇ ? ಸೃಷ್ಟಿಯ ನಿಷ್ಠೆಯೇ ? ಜೀವಪರ ನಿಲುವುಗಳೇ ? ದೇಶ ಮತ್ತು ಜನತೆಯ ನೆಮ್ಮದಿಯ ತಂತ್ರಗಳೇ ?

ಅಥವಾ ಇವುಗಳೆಲ್ಲವುಗಳ ಒಟ್ಟು ಸಮೀಕರಣವೇ ?

ಬಹುಶಃ ಭಾರತದ ಸಂವಿಧಾನದ ಪೀಠಿಕೆ ಮತ್ತು ಅದರ ಆಳ ಅಗಲಗಳನ್ನು ಗಮನಿಸಿದಾಗ ಈ ಎಲ್ಲಾ ಸಾರಾಂಶಗಳ ಒಟ್ಟು ಮೊತ್ತ ಎಂದು ನಿರ್ಧರಿಸಬಹುದು.

ಧರ್ಮ ಮತ್ತು ಸಂವಿಧಾನ.......

ಧರ್ಮದ ಮುಂದುವರಿದ ಭಾಗವೇ ಸಂವಿಧಾನ ಎಂದೂ ಅರ್ಥೈಸಬಹುದು. ಆದರೆ ಧರ್ಮವನ್ನು ಮೀರಿದ ಸ್ವಾತಂತ್ರ್ಯ, ಸಮಾನತೆ, ಮಾನವೀಯತೆ, ಸಹಜತೆ ಸಂವಿಧಾನದಲ್ಲಿ ಅಡಕವಾಗಿರುತ್ತದೆ. ಅನೇಕ ಕಾರಣಗಳಿಗಾಗಿ ಎಲ್ಲಾ ಧರ್ಮದಲ್ಲಿ ಒಂದಷ್ಟು ಅಮಾನವೀಯ ಅಸ್ವಾಭಾವಿಕ ಹುಳುಕುಗಳು ಸೇರಿರುತ್ತವೆ. ಶ್ರೇಷ್ಠತೆಯ ವ್ಯಸನ ಧರ್ಮಗಳ ಬಹುದೊಡ್ಡ ಲೋಪ. ಹಾಗೆಯೇ ಸಾಮಾನ್ಯವಾಗಿ ಧರ್ಮಗಳು ಬದಲಾವಣೆಗಳನ್ನು ಅಷ್ಟು ಸುಲಭವಾಗಿ ಒಪ್ಪುವುದಿಲ್ಲ....

ಆದರೆ ಸಂವಿಧಾನದಲ್ಲಿ ಆ ರೀತಿಯ ಲೋಪದೋಷಗಳು ತುಂಬಾ ಕಡಿಮೆ ಮತ್ತು ಕಾಲದ ಪ್ರವಾಹದಲ್ಲಿ ಆ ರೀತಿಯ ವ್ಯತ್ಯಾಸ ಕಂಡುಬಂದರೆ ತಿದ್ದುಪಡಿಗೆ ಸದಾ ಅವಕಾಶ ಇದ್ದೇ ಇರುತ್ತದೆ....

ಸಂವಿಧಾನ ಮತ್ತು ಧರ್ಮದ ಆಯ್ಕೆಯಲ್ಲಿ ನಮ್ಮ ನಿಲುವು ಯಾವುದಿರಬೇಕು ? ಬಹುಶಃ ಇದು ಪಂಥೀಯ ವಾದಗಳು ಹೆಚ್ಚು ಪ್ರಚಲಿತದಲ್ಲಿರುವ ಈ ಸಂದರ್ಭದಲ್ಲಿ ಬಹುಮುಖ್ಯ ಪ್ರಶ್ನೆಯಂತೆ ಕೆಲವರನ್ನು ಕಾಡುತ್ತಿರಬಹುದು. ಧಾರ್ಮಿಕ ಮೂಲಭೂತವಾದಿಗಳು ಧರ್ಮ ಎಂದರೆ, ಅತಿರೇಕದ ಎಡಪಂಥೀಯರು ಸಂವಿಧಾನ ಎಂದರೆ, ಮಧ್ಯಮ ಮಾರ್ಗಿಗಳು ಎರಡೂ ಮುಖ್ಯ ಎಂದು ಹೇಳುವುದನ್ನು ಗಮನಿಸಿದ್ದೇನೆ. ಸಾಮಾಜಿಕ ರಾಜಕೀಯ ಸಾಮರಸ್ಯ ತೀರಾ ಕೆಳಹಂತದಲ್ಲಿ ಇಳಿದಿರುವಾಗ ಇದು ಸಹಜ......

### ಹಾಗಾದರೆ ವಾಸ್ತವ ಏನು ?

ಧರ್ಮ ಮತ್ತು ಸಂವಿಧಾನ ಎರಡು ವಿರುದ್ಧ ಚಿಂತನೆಗಳೇನಲ್ಲ. ಸಾಮಾನ್ಯ ಜ್ಞಾನವನ್ನು ಉಪಯೋಗಿಸಿದರೆ ಸಾಕು ಅವು ಎರಡು ಒಂದಕ್ಕೊಂದು ಪೂರಕ, ಅದರಲ್ಲೂ ಭಾರತದ ಸಂವಿಧಾನ ಬಹುತೇಕ ಎಲ್ಲಾ ರೀತಿಯ ಸ್ವಾತಂತ್ರ್ಯವನ್ನು ಮುಖ್ಯವಾಗಿ ಧಾರ್ಮಿಕ ಸ್ವಾತಂತ್ರ್ಯವನ್ನು ಎಲ್ಲರಿಗೂ ನೀಡಿದೆ ಎಂದು ಅರ್ಥವಾಗುತ್ತದೆ.....

ಸಾಮಾನ್ಯ ಜನರಲ್ಲಿ ಸಂವಿಧಾನವನ್ನೇ ಒಂದು ಧರ್ಮ ಎಂದು ಆಚರಿಸುವುದು ಒಂದು ಸಮಸ್ಯೆಯಲ್ಲ. ಸಂವಿಧಾನದಲ್ಲಿ ಧಾರ್ಮಿಕ ಆಧ್ಯಾತ್ಮಿಕ ಆಚರಣೆಗೆ ಎಲ್ಲಾ ಅವಕಾಶಗಳು ಇವೆ. ಆದರೆ ಸಮಸ್ಯೆ ಇರುವುದು ಧಾರ್ಮಿಕ ಮತ್ತು ರಾಜಕೀಯ ಕ್ಷೇತ್ರದ ಮುಖಂಡರಿಂದ. ರಾಜಕೀಯ ಮೇಲಾಟಕ್ಕಾಗಿ ಧರ್ಮವನ್ನು ಎಳೆದು ತರುವುದು, ಹಾಗೆಯೇ ಧರ್ಮಾಧಿಕಾರಿಗಳು ತಮ್ಮ ಅಸ್ತಿತ್ವ ಉಳಿಸಿಕೊಳ್ಳಲು ಧರ್ಮದ ಅಮಲನ್ನು ಜನರಲ್ಲಿ ತುಂಬುವುದು ಅತ್ಯಂತ ಅಪಾಯಕಾರಿ ಬೆಳವಣಿಗೆ. ಒಂದು ಸಣ್ಣ ಉದಾಹರಣೆ ನೋಡಿ....

ಧರ್ಮಗಳು ( ಮತಗಳು ) ಜನರನ್ನು ಹಿಂದು ಮುಸ್ಲಿಮ್ ಕ್ರಿಶ್ಚಿಯನ್ ಸಿಖ್ ಪಾರ್ಸಿ ಜೈನ್ ಬೌದ್ಧ ವೀರಶೈವ ಲಿಂಗಾಯತ ಎಂದು ವಿಂಗಡಿಸಿದರೆ ನಮ್ಮ ಸಂವಿಧಾನ ಎಲ್ಲರನ್ನೂ ಭಾರತೀಯರು ಎಂದು ಸಮನಾಗಿ ಕಾಣುತ್ತದೆ. ಹಾಗಾದರೆ ನಮ್ಮ ಆಯ್ಕೆ ವಿಭಜನೆಗೋ ಸಮಾನತೆಗೋ ಯೋಚಿಸಿ ನಿರ್ಧರಿಸಿ.....

ಹಾಗಾದರೆ ಸಂವಿಧಾನದಿಂದ ಭಾರತದ ಎಲ್ಲಾ ಪ್ರಜೆಗಳಿಗೆ ಸ್ವಾತಂತ್ರ್ಯ ಮತ್ತು ಸಮಾನತೆ ದೊರೆತಿದೆಯೇ ಎಂದರೆ ಖಂಡಿತ ಇಲ್ಲ ಎಂದೇ ಹೇಳಬೇಕಾಗುತ್ತದೆ. ತಾಂತ್ರಿಕವಾಗಿ ಮತ್ತು ಪುಸ್ತಕದಲ್ಲಿ ಸಮಾನತೆ ಇದ್ದರು ವಾಸ್ತವದಲ್ಲಿ ಅದು ಬಲಿಷ್ಠರ ಮತ್ತು ಅಪರಾಧಿಗಳ ಆಶ್ರಯ ತಾಣವೇ ಆಗಿದೆ. " ನೂರು ಜನ ಅಪರಾಧಿಗಳು ತಪ್ಪಿಸಿಕೊಂಡರು ಒಬ್ಬ ನಿರಪರಾಧಿಗೆ ಶಿಕ್ಷೆ ಆಗಬಾರದು " ಎಂಬ ಉದಾತ್ತ ಧ್ಯೇಯದ ದುರುಪಯೋಗ ಎಲ್ಲೆಡೆಯೂ ಕಂಡುಬರುತ್ತಿದೆ. ಹಣ – ಸಾಕ್ಷಿ ಮತ್ತು ತಂತ್ರಗಾರಿಕೆಯೇ ಕಾನೂನಿನ ಮುಖ್ಯ ಆಧಾರ ಸ್ಥಂಭವಾಗಿ ನೈತಿಕತೆಗೆ ಯಾವ ಜಾಗವೂ ಇಲ್ಲ.....

ಆದ್ದರಿಂದಲೇ ಸುಪ್ರೀಂ ಕೋರ್ಟ್ ಸಹ " ಅಂಣಡಿಣ ತಿಟಟ ಜಜಟುತಜಢಿ ಣುಜ ಟಚಿತಿ ಟಿಂಣ ಣುಜ ಎಣಾಣುಥಿಜ "( ನ್ಯಾಯಾಲಯಗಳು ಕಾನೂನು ನೀಡುತ್ತವೆಯೇ ಹೊರತು ನ್ಯಾಯವೇ ಆಗಿರುತ್ತದೆ ಎಂದು ಹೇಳುವುದು ಸಾಧ್ಯವಿಲ್ಲ " ಎಂಬ ಅರ್ಥದ ಮಾತುಗಳನ್ನು ಹೇಳಿದೆ ಎಂದು ವಕೀಲರೊಬ್ಬರು ಹೇಳಿದರು....

ಇದರ ಒಟ್ಟು ತಾತ್ಪರ್ಯ ಇಷ್ಟೇ. ಧರ್ಮವೇ ಇರಲಿ, ಕಾನೂನೇ ಇರಲಿ ವ್ಯಕ್ತಿಗಳಲ್ಲಿ ಮತ್ತು ಸಮಾಜದಲ್ಲಿ ನೈತಿಕತೆ ಮತ್ತು ಮಾನವೀಯತೆ ಕುಸಿದಾಗ ಎಲ್ಲವೂ ವಿಫಲವಾಗುತ್ತದೆ....

ಈ ಕ್ಷಣದಲ್ಲಿ ಸಂವಿಧಾನವೂ ಕೂಡ ಸಮಾಧಾನಕರವಾಗಿ ಜನರ ಹಿತ ರಕ್ಷಣೆಯನ್ನು ಮಾಡುತ್ತಿದೆ ಎಂದು ಆತ್ಮಸಾಕ್ಷಿಯಾಗಿ ಹೇಳಲು ಸಾಧ್ಯವಾಗುತ್ತಿಲ್ಲ.....

ಯಾವುದೇ ಅಪರಾಧಗಳಲ್ಲಿ ಶೇಕಡಾ 90 ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಅಪರಾಧಿಗಳಿಗೆ ಶಿಕ್ಷೆ ಆಗುತ್ತಿಲ್ಲ. ಪಕ್ಷಾಂತರ ನಿಷೇಧ ಕಾನೂನು ಜಾರಿಯಲ್ಲಿದ್ದರು ಶಾಸಕರ ಮಾರಾಟ ಬಹಿರಂಗವಾಗಿ ನಡೆಯುತ್ತಿದೆ, ಭ್ರಷ್ಟಾಚಾರ ವಿರೋಧಿ ಕಾನೂನುಗಳು ಇದ್ದರು ಇಡೀ ವ್ಯವಸ್ಥೆ ಭ್ರಷ್ಟಗೊಂಡಿದೆ....

ಆದ್ದರಿಂದ ಸಂವಿಧಾನ ದಿನದ ಇಂದು ಕನಿಷ್ಠ

"ಸಂವಿಧಾನ ಎಂಬುದು ಕೇವಲ ಧರ್ಮವಲ್ಲ ಅಥವಾ ಕಾನೂನಲ್ಲ. ಅದು ಭಾರತೀಯ ಸಮಾಜದ ಜೀವನ ವಿಧಾನ. ನಾಗರಿಕ ಸಮಾಜದ ಹಕ್ಕು ಮತ್ತು ಕರ್ತವ್ಯಗಳ ಪ್ರಜ್ಞೆ. ಮಾನವೀಯ ಮೌಲ್ಯಗಳ ವಿಕಾಸದ ಮಾರ್ಗ. ಅದನ್ನು ಗೌರವಿಸೋಣ – ಅನುಸರಿಸೋಣ – ಕಾಲಕ್ಕೆ ತಕ್ಕಂತೆ ಪ್ರಜಾಪ್ರಭುತ್ವ ನಿಯಮಗಳ ಅಡಿಯಲ್ಲಿ ತಿದ್ದುಪಡಿ ಒಪ್ಪಿಕೊಳ್ಳೋಣ – ಜನರ ಜೀವನಮಟ್ಟ ಸುಧಾರಿಸಲು ಮತ್ತಷ್ಟು ಬಲಪಡಿಸೋಣ " ಎಂದು ಆತ್ಮಸಾಕ್ಷಿಯ ಪ್ರತಿಜ್ಞೆ ಮಾಡೋಣ....

" ಸಂವಿಧಾನ ಪುಸ್ತಕ ರೂಪದ ಅಕ್ಷರಗಳಲ್ಲ. ಅದು ಭಾರತೀಯ ಸಮಾಜದ ಸಾಂಸ್ಕೃತಿಕ ವ್ಯಕ್ತಿತ್ವ "...

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ.



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ಎಪಿಎಂಸಿ ಕಚೇರಿಯಲ್ಲಿ ರಾಷ್ಟ್ರೀಯ ಐಕ್ಯತಾ ಸಪ್ತಾಹ: ಪ್ರಮಾಣವಚನ ಬೋಧನೆ

» **ಚಳ್ಳಕೆರೆ**

ಸಾರ್ವಜನಿಕ ಕ್ಷೇತ್ರದಲ್ಲಿ ಉತ್ತಮ ಕೆಲಸ ಮಾಡುವ ಮೂಲಕ ಜನರ ವಿಶ್ವಾಸವನ್ನು ಗಳಿಸಬೇಕಿದೆ. ಯಾವುದೇ ಬೇದಭಾವವಿಲ್ಲದೆ ನಾವೆಲ್ಲರೂ ಜನರೊಂದಿಗೆ ಬೆರೆಯಬೇಕು. ನಾವು ಜನರ ಸೇವಕರು ಎಂಬುವುದನ್ನು ಎಂದಿಗೂ ಮರೆಯಬಾರದು ಎಂದು ಎಪಿಎಂಸಿ ಪ್ರಭಾರಕಾರ್ಯದರ್ಶಿ ಜಿ.ಎಸ್.ಸುರೇಶ್ ತಿಳಿಸಿದರು.

ಅವರು, ನಗರದ ಮಾರುಕಟ್ಟೆ ಕಚೇರಿಯಲ್ಲಿ ರಾಷ್ಟ್ರೀಯ ಐಕ್ಯತಾ ಸಪ್ತಾಹ ಅಂಗವಾಗಿ ಸಿಬ್ಬಂದಿ ವರ್ಗಕ್ಕೆ ಐಕ್ಯತಾ ಪ್ರಮಾಣವಚನವನ್ನು ಬೋಧಿಸಿ ಮಾತನಾಡಿದರು. ಕೃಷಿ ಉತ್ಪನ್ನಮಾರುಕಟ್ಟೆ ರೈತರು ಮತ್ತು ವ್ಯಾಪಾರಿಗಳ ಹಿತವನ್ನು ಕಾಯುವುದರಲ್ಲಿ ಸಂಶಯವಿಲ್ಲವೆಂದರು.

ಹಿರಿಯ ಮಾರುಕಟ್ಟೆ ಮೇಲ್ವಿಚಾರಕ ಆರ್. ಹರಿಪ್ರಸಾದ್, ಟಿ.ವೆಂಕಟಲಕ್ಷ್ಮಿ, ಸುಧಾ, ಗಂಗಪ್ಪ, ಅಜಾರ್, ಅನಿಲ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.



## ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಬೇಡಿಕೆ ಈಡೇರಿಕೆಗೆ ಡಿಸೆಂಬರ್ 10ಕ್ಕೆ ಬೆಳಗಾವಿ ಚಲೋ

**ಚಳ್ಳಕೆರೆ:** ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಬೇಡಿಕೆ ಈಡೇರಿಕೆಗೆ ಡಿ.10 ಬೆಳಗಾವಿ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ರಾಜ್ಯ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಫೆಡರೇಷನ್ ಪ್ರಧಾನ ಕಾರ್ಯದರ್ಶಿ ಎಂ.ಜಯಮ್ಮ ತಿಳಿಸಿದರು. ಅವರು, ಶನಿವಾರ ನಗರದ ಕಂಬಳಿ ಮಾರುಕಟ್ಟೆ ಆವರಣದಲ್ಲಿ ಎಐಟಿಯುಸಿ ಸಂಘಟನೆ ಆಯೋಜಿಸಿದ್ದ ಬೆಳಗಾವಿ ಚಲೋ ಕಾರ್ಯಕ್ರಮದ ಸಮಾಲೋಚನಾ ಸಭೆಯನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಪೌಷ್ಠೀಕಾಂಶದ ಆಹಾರದಿಂದ ಹಿಡಿದು ಗ್ರಾಮೀಣ ಭಾಗದ ರೋಗಿಗಳ ಬಗ್ಗೆ ಹೆಚ್ಚು ಜಾಗೃತಿ ವಹಿಸುತ್ತಾ ಬಂದಿದ್ದಾರೆ. ಆದ್ದರಿಂದ ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸೇವೆಯನ್ನು ಖಾಯಂಗೊಳಿಸಬೇಕು, ಡಿ.10ರ ಬೆಳಗಾವಿಚಲೋ ಕಾರ್ಯಕ್ರಮ ಯಶಸ್ವಿಗೆ ಎಲ್ಲರೂ ಕೈಜೋಡಿಸಬೇಕೆಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T